ಸಂಪುಟ : 10 ಸಂಚಿಕೆ: 166 ಪುಟ : 4+2 ಬೆಲೆ: 3.00 ಗುರುವಾರ ಆಗಸ್ಟ್ 07 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 166 Pages : 4+2 Price : 3.00 Thursday August 07 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ರೈತ ಬಾಂಧವರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನಲ್ಲಿ ಮರುವಿನ್ಯಾಸ ಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯನ್ನು ಗದಗ ಜಿಲ್ಲೆಯಲ್ಲಿ ಅನುಷ್ಠಾನಗೊಳಿಸಲು ಸರ್ಕಾರದ ಆದೇಶದಲ್ಲಿ ಅಧಿಸೂಚನೆಯನ್ನು ಹೊರಡಿಸಲಾಗಿದ್ದು , ದಾಳಿಂಬೆ, ಪಪ್ಪಾಯ, ದ್ರಾಕ್ಷಿ ಹಾಗೂ ಮಾವು ಬೆಳೆಗಳನ್ನು ಬೆಳೆದ ಬೆಳೆ ಸಾಲ ಪಡೆಯುವ ರೈತರಿಗೆ ದಿ. 30.08.2025 ಮತ್ತು ಬೆಳೆ ಸಾಲ ಪಡೆಯದ ರೈತರಿಗೆ ವಿಮಾ ಕಂತನ್ನು ಪಾವತಿಸಲು ದಿ. 14.08.2025 ರವರೆಗೆ ವಿಸ್ತರಿಸಲಾಗಿದ್ದು , ಆಸಕ್ತ ರೈತರು ಸಂಬಂಧಿತ ಬ್ಯಾಂಕ್‌ಗಳ ಮೂಲಕ ಹಾಗೂ ಬೆಳೆ ಸಾಲ ಪಡೆಯದ ರೈತರು ಗ್ರಾಮ ಒನ್ ಕೇಂದ್ರ/ಸಾಮಾನ್ಯ ಸೇವಾ ಕೇಂದ್ರಗಳ ಮೂಲಕ ಕೂಡಾ ಈ ಯೋಜನೆಯಡಿ ನೋಂದಾಯಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ತೋಟಗಾರಿಕೆ ಕಚೇರಿ ಅಥವಾ ರೈತ ಸಂಪರ್ಕ ಕೇಂದ್ರದ ಅಧಿಕಾರಿಗಳನ್ನು ಸಂಪರ್ಕಿಸಿ ಹೆಚ್ಚಿನ ಮಾಹಿತಿಯನ್ನು ಪಡೆಯಬಹುದೆಂದು ತೋಟಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಗದಗ ವತಿಯಿಂದ ವಿಕಲಚೇತನರ ವಿವಾಹ ಪ್ರೋತ್ಸಾಹಧನ ಯೋಜನೆಯಡಿ (ವಿಕಲಚೇತನ ವ್ಯಕ್ತಿಗಳನ್ನು ವಿವಾಹವಾಗುವ ಸಾಮಾನ್ಯ ವ್ಯಕ್ತಿಗಳಿಗೆ ನೀಡುವ ಪ್ರೋತ್ಸಾಹಧನ), ನಿರಾಮಯ ಯೋಜನೆಯಡಿ (ಬುದ್ಧಿಮಾಂಧ್ಯ, ಸೆರ್‌ಬ್ರಲ್ ಪಾಲ್ಸಿ, ಆಟಿಸಂ & ಬಹುವಿಧ ವಿಕಲಚೇತನರಿಗೆ) ಹಾಗೂ ಶುಲ್ಕ ಮರುಪಾವತಿ ಯೋಜನೆಯಡಿ (ಎಸ್.ಎಸ್.ಎಲ್.ಸಿ ನಂತರ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ, ಸ್ನಾತಕೋತ್ತರ, ಔದ್ಯೋಗಿಕ ಶಿಕ್ಷಣ ವ್ಯಾಸಂಗ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿಗಳಿಗೆ ಪರೀಕ್ಷಾ ಶುಲ್ಕ, ಭೋದನಾ ಶುಲ್ಕ, ಪ್ರಯೋಗಾಲಯ ಶುಲ್ಕ, ಪ್ರವೇಶ ಶುಲ್ಕ, ಗ್ರಂಥಾಲಯ ಶುಲ್ಕಗಳನ್ನು ಸರ್ಕಾರ ನಿಗದಿಪಡಿಸಿರುತ್ತಾರೆ) ಸದರಿ ಯೋಜನೆಗಳಡಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಸದರಿ ಯೋಜನೆಗಳಡಿ ಜಿಲ್ಲೆಯ ಅರ್ಹ ವಿಕಲಚೇತನರು ಸೌಲಭ್ಯವನ್ನು ಪಡೆಯಲು ಸೆಪ್ಟೆಂಬರ್ 10 ರಂದು ಸಂಜೆ 5:30 ಗಂಟೆಯೊಳಗಾಗಿ ನಿಗದಿತ ಅರ್ಜಿ ನಮೂನೆಯನ್ನು ಭರ್ತಿ ಮಾಡಿ ಅಗತ್ಯ ದೃಢೀಕೃತ ದಾಖಲಾತಿಗಳೊಂದಿಗೆ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿರುವ ವಿ.ಆರ್.ಡಬ್ಲ್ಯೂ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿರುವ ಯು.ಆರ್.ಡಬ್ಲ್ಯೂ ಹಾಗೂ ತಾಲೂಕು ಪಂಚಾಯತಿಯಲ್ಲಿರುವ ಎಮ್.ಆರ್.ಡಬ್ಲ್ಯೂಗಳಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಸಂಯೋಜಕರು - 9606151149 ಹಾಗೂ ಗದಗ ಜಿಲ್ಲೆಯ ತಾಲೂಕು ಪಂಚಾಯತ್ ವ್ಯಾಪ್ತಿಯಲ್ಲಿರುವ ಕಾರ್ಯನಿರ್ವಹಿಸುತ್ತಿರುವ ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರು, ತಾಲೂಕು ಪಂಚಾಯತ್, ಗದಗ - 8867556465, ; ತಾಲೂಕು ಪಂಚಾಯತ್, ರೋಣ/ಗಜೇಂದ್ರಗಡ - 9741615926 ; ತಾಲೂಕು ಪಂಚಾಯತ್, ಮುಂಡರಗಿ 9611922445 ; ತಾಲೂಕು ಪಂಚಾಯತ್, ಶಿರಹಟ್ಟಿ/ಲಕ್ಷ್ಮೇಶ್ವರ - 8951128679 ; ತಾಲೂಕು ಪಂಚಾಯತ್, ನರಗುಂದ - 9591679022 ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಗದಗ ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ: 029 ರ ದೂರವಾಣಿ ಸಂಖ್ಯೆ: 08372-220419 ಮೂಲಕ ಸಂಪರ್ಕಿಸಬಹುದಾಗಿದೆ.

### ಗಜೇಂದ್ರಗಡ ತಾ.ಪಂ ಪ್ರಗತಿ ಪರಿಶೀಲನಾ ಸಭೆಯಲ್ಲಿ ನೂತನ ಇಒ ಚಂದ್ರಶೇಖರ ಬಿ.ಕಂದಕೂರು

# ಪ್ರಗತಿಗೆ ಶ್ರಮಿಸದಿದ್ದರೆ ಕಠಿಣ ಕ್ರಮ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ತಾಲೂಕಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಲ್ಲ ಕಾರ್ಯಕ್ರಮಗಳಲ್ಲಿ ನಿಗದಿತ ಗುರಿಗೆ ಅನುಗುಣವಾಗಿ, ಸರಿಯಾದ ಸಮಯಕ್ಕೆ ಪ್ರಗತಿ ಸಾಧಿಸಬೇಕು. ಗುರಿಗೆ ಅನುಗುಣವಾಗಿ ಪ್ರಗತಿಗೆ ಶ್ರಮಿಸದ ಅಧಿಕಾರಿಗಳ ವಿರುದ್ಧ ಕಡ್ಡಾಯವಾಗಿ ಕಠಿಣ ಕ್ರಮ ತಗೆದುಕೊಳ್ಳಲಾಗುವುದು. ಹಾಗೆಯೇ ಪ್ರಗತಿಗೆ ಶ್ರಮಿಸುವ ಅಧಿಕಾರಿಗಳನ್ನು ಗೌರವಿಸುವ ಕೆಲಸವನ್ನೂ ಮಾಡಲಾಗುವುದು ಎಂದು ನೂತನ ಇಒ ಚಂದ್ರಶೇಖರ ಬಿ.ಕಂದಕೂರು ಸಂಬಂಧಿಸಿದ ತಾಲೂಕಿನ ಅಧಿಕಾರಿಗಳ ವಿರುದ್ಧ ಮೊದಲ ಪ್ರಗತಿ ಪರಿಶೀಲನಾ ಸಭೆಯಲ್ಲಿ ಚಾಟಿ ಬೀಸಿದರು.

ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ಬೆಳಿಗ್ಗ ನಡೆದ ತಾಲೂಕಿನ ಪ್ರಗತಿ ಪರಿಶೀಲನಾ ಸಭೆಯಲ್ಲಿ ತಾಲೂಕಿನ 13 ಗ್ರಾಮ ಪಂಚಾಯಿತಿಗಳ ಪಂಚಾಯತ ಅಧಿಕಾರಿಗಳು, ತಾಲೂಕು ನರೇಗಾ ಸಿಬ್ಬಂದಿ ವರ್ಗ, ಬಿಲ್ ಕಲೆಕ್ಟರ್‌ಗಳು, ಪಂಚಾಯತ ಕಾರ್ಯದರ್ಶಿ, ಕಂಪ್ಯೂಟರ್ ಆಪರೇಟರ್‌ಗಳು, ಬಿಎಫ್‌ಟಿಗಳು, ಗ್ರಾಮ ಕಾಯಕ ಮಿತ್ರರನ್ನು ಉದ್ದೇಶಿಸಿ ಅವರು ಮಾತನಾಡಿದರು.

ತಾಲೂಕಿನಲ್ಲಿ ಗ್ರಾ.ಪಂಗಳ ವ್ಯಾಪ್ತಿಯಲ್ಲಿ ತೆರಿಗೆ ವಸೂಲಾತಿ ಕುಂಠಿತವಾಗಿದೆ. ಗಜೇಂದ್ರಗಡ ತಾಲೂಕು




ಮುಂದಿನ ವಾರದಲ್ಲಿ ತೆರಿಗೆ ವಸೂಲಾತಿಯಲ್ಲಿ ಜಿಲ್ಲೆಯಲ್ಲಿಯೇ ಪ್ರಥಮ ಸ್ಥಾನ ಪಡೆಯಬೇಕು. ತಾಲೂಕಿನ ಎಲ್ಲ ಗ್ರಾ.ಪಂಗಳು ಶೇ.50ಕ್ಕಿಂತ ಹೆಚ್ಚು ಪ್ರಗತಿ ಸಾಧಿಸಬೇಕು. ವಾರದೊಳಗೆ ಅತೀ ಹೆಚ್ಚು ತೆರಿಗೆ ವಸೂಲಾತಿ ಮಾಡುವ 5 ಗ್ರಾ.ಪಂಗಳ ಬಿಲ್ ಕಲೆಕ್ಟರ್‌ಗಳಿಗೆ ಚಾಂಪಿಯನ್ಸ್ ಆಫ್ ಟ್ಯಾಕ್ಸ್ ಕಲೆಕ್ಷನ್ ಎಂಬ ಹೆಸರಿನಡಿ ಪ್ರೋತ್ಸಾಹಕವಾಗಿ ಪ್ರಮಾಣ ಪತ್ರ ಮತ್ತು ಪಾರಿತೋಷಕ ನೀಡಿ ಗೌರವ ಸಲ್ಲಿಸಲಾಗುವುದು ಎಂದರು.

ನರೇಗಾ ಯೋಜನೆಯಡಿ ಪ್ರಗತಿಯಲ್ಲಿರುವ ಶಾಲಾ ಅಭಿವೃದ್ಧಿ ಕಾಮಗಾರಿಗಳನ್ನು ತುರ್ತಾಗಿ ಪೂರ್ಣಗೊಳಿಸಬೇಕು. ಯೋಜನೆಯಡಿ ಯಾವುದೇ ಕಾಮಗಾರಿಯನ್ನು ವಿಳಂಬ ಮಾಡದೇ ತಾಂತ್ರಿಕವಾಗಿ ಮತ್ತು ಆಡಳಿತಾತ್ಮಕವಾಗಿ ಒಪ್ಪಿಗೆ ನೀಡಿ ತ್ವರಿತಗತಿಯಲ್ಲಿ ಪೂರ್ಣಗೊಳ್ಳುವಂತೆ ನರೇಗಾ ಸಿಬ್ಬಂದಿ ಮುತುವರ್ಜಿ ವಹಿಸಬೇಕು. ವೈಯಕ್ತಿಕ ಕಾಮಗಾರಿಗಳು ಸೇರಿದಂತೆ ಕ್ರಿಯಾಯೋಜನೆಯ ಎಲ್ಲ ಕೆಲಸಗಳಿಗೆ ತಾಂತ್ರಿಕ ಸಿಬ್ಬಂದಿ ಅಂದಾಜು ಪತ್ರಿಕೆ ಸಿದ್ಧಪಡಿಸಬೇಕು ಎಂದು ಸೂಚಿಸಿದರು.

ಸ್ವಚ್ಛ ಭಾರತ್ ಮಿಶನ್, ಮುಂದುವರೆದ ಕಾಮಗಾರಿಗಳ ಪೂರ್ಣಗೊಳಿಸುವಿಕೆ, ಕಸದ ವಾಹನಗಳಿಗೆ ಮಹಿಳಾ ಡ್ರೈವರ್‌ಗಳ ನೇಮಕ ಪ್ರಕ್ರಿಯೆ ಪೂರ್ಣಗೊಳಿಸುವುದು, ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಕ್ರಮವಹಿಸುವುದು ಸೇರಿದಂತೆ ಪ್ರಮುಖ ಕಾರ್ಯಕ್ರಮಗಳ ಪ್ರಗತಿ ಪರಿಶೀಲಿಸಿದರು.

ಸಭೆಯಲ್ಲಿ ತಾ.ಪಂ ಸಹಾಯಕ ನಿರ್ದೇಶಕ (ಉದ್ಯೋಗ ಖಾತರಿ) ಬಸವರಾಜ ಬಡಿಗೇರ್ ನೂತನ ಇಒ ಚಂದ್ರಶೇಖರ ಬಿ.ಕಂದಕೂರು ಅವರಿಗೆ ಸಾಥ್ ನೀಡಿದರು.

> ತಾಲೂಕಿನ ಎಲ್ಲ ಗ್ರಾಮ ಪಂಚಾಯಿತಿಗಳಲ್ಲಿ ಸಾರ್ವಜನಿಕ ಸ್ನೇಹಿ ವಾತಾವರಣ ನಿರ್ಮಾಣ ಮಾಡಬೇಕು. ಇದಕ್ಕೆ ಪೂರಕವಾಗಿ ಪಿಡಿಒ ಸೇರಿದಂತೆ ಗ್ರಾ.ಪಂ ಸಿಬ್ಬಂದಿಗಳು ಸರಿಯಾದ ಸಮಯಕ್ಕೆ ಕರ್ತವ್ಯಕ್ಕೆ ಹಾಜರಾಗಿ ಕಚೇರಿಗೆ ಬರುವ ಸಾರ್ವಜನಿಕರೊಂದಿಗೆ ವಿನಯದಿಂದ ವರ್ತಿಸಬೇಕು. ಈ ಮೂಲಕ ತಾಲೂಕಿನ ಸಾರ್ವಜನಿಕರಿಗೆ ಸರ್ಕಾರಿ ಕಚೇರಿಗಳ ಬಗ್ಗೆ ವಿಶ್ವಾಸ ಮೂಡಿಸುವ ಕೆಲಸ ಮಾಡಿ.
>
> **- ಚಂದ್ರಶೇಖರ ಬಿ.ಕಂದಕೂರು.**
> ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ.

### ನಾಗಾವಿ, ಅಸುಂಡಿ ಗ್ರಾ.ಪಂಗೆ ಭೇಟಿ ನೀಡಿದ ಜಿ.ಪಂ ಸಿಇಒ ಭರತ್ ಎಸ್

# ಮೂಲದಲ್ಲಿಯೇ ತಾಜ್ಯ ನಿರ್ವಹಣೆಗೆ ಕ್ರಮ ವಹಿಸಿ



> ಸರಕಾರ ಮಹಿಳಾ ಸಬಲೀಕರಣಕ್ಕೆ ಆದ್ಯತೆ ನೀಡಿದೆ. ಈ ನಿಟ್ಟಿನಲ್ಲಿ ಗ್ರಾಮೀಣ ಭಾಗದಲ್ಲಿ ಮಹಿಳಾ ಸ್ವ-ಸಹಾಯ ಸಂಘದ ಸಹಯೋಗದೊಂದಿಗೆ ಮನೆ ಮನೆಗೆ ಭೇಟಿ ನೀಡಿ ಸಾರ್ವಜನಿಕರಿಗೆ ತ್ಯಾಜ್ಯ ನಿರ್ವಹಣೆಯ ಬಗ್ಗೆ ಜಾಗೃತಿ ಮೂಡಿಸಲಾಗಿದೆ. ಆಯಾ ಗ್ರಾಮಗಳಲ್ಲಿ ತ್ಯಾಜ್ಯ ಶೇಖರಣೆ-ವಿಂಗಡಣೆ ಮಾಡುವ ಮೂಲಕ ಸ್ವಚ್ಛತೆ ಕಾಪಾಡಲಾಗುತ್ತಿದೆ ಎಂದು ಜಿ.ಪಂ ಸಿಇಓ ಭರತ್ ಎಸ್ ಹೇಳಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ಕಸ ಸಂಗ್ರಹಣೆ ಮೂಲಕ ಘನ ತಾಜ್ಯ ವಸ್ತುಗಳನ್ನು ಮೂಲದಲ್ಲಿಯೇ ವೈಜ್ಞಾನಿಕವಾಗಿ ನಿರ್ವಹಣೆ ಮಾಡುವುದರ ಜೊತೆಗೆ ಗ್ರಾಮದ ಸ್ವಚ್ಛತೆಗೆ ಎಲ್ಲರೂ ಸಹಕರಿಸಬೇಕು ಎಂದು ಗದಗ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಸೂಚನೆ ನೀಡಿದರು.

ಬುಧವಾರ ಗದಗ ತಾಲೂಕಿನ ನಾಗಾವಿ ಮತ್ತು ಅಸುಂಡಿ ಗ್ರಾ.ಪಂಗಳಿಗೆ ಭೇಟಿ ನೀಡಿ, ಸ್ವಚ್ಛ ಭಾರತ ಗ್ರಾಮೀಣ ಯೋಜನೆಯಡಿ ಕಸ ಸಂಗ್ರಹಣೆಯ ಸ್ಥಳ ಪರಿಶೀಲನೆ ನಡೆಸಿ ಅವರು ಮಾತನಾಡಿದರು.

ಗ್ರಾಮೀಣ ಭಾಗದಲ್ಲಿ ಕಸ ಸಂಗ್ರಹಣೆ, ವಿಂಗಡಣೆ ಜವಾಬ್ದಾರಿಯನ್ನು ಸಂಜೀವಿನಿ ಒಕ್ಕೂಟದ ಮಹಿಳಾ ಸ್ವ-ಸಹಾಯ ಸಂಘದ ಸದಸ್ಯರಿಗೆ ವಹಿಸಲಾಗಿದ್ದು, ಇದರ ಸಮರ್ಪಕ ಬಳಕೆ ಕುರಿತು ಖುದ್ದಾಗಿ ನಾಗಾವಿ ಗ್ರಾ.ಪಂ ಸ್ವಚ್ಛ ವಾಹಿನಿ ನಿರ್ವಹಿಸುವ ವಾಹನ ಚಾಲಕಿಯರೊಂದಿಗೆ ವಾಹನದಲ್ಲಿ ಸಂಚರಿಸಿ, ವಾಹನ ಚಲಾಯಿಸುವ ಕುರಿತು ಮೇಲ್ವಿಚಾರಣೆ ನಡೆಸಿದರು. ಗ್ರಾಮಸ್ಥರೊಂದಿಗೆ ಕಸ ಸಂಗ್ರಹಣೆ ಮತ್ತು ನಿರ್ವಹಣೆ ಮಾಡುತ್ತಿರುವ ಬಗ್ಗೆ ಚರ್ಚಿಸಿದರು. ನಂತರ ಅಸುಂಡಿ ಗ್ರಾ.ಪಂಗೆ ಭೇಟಿ ನೀಡಿ, ಗ್ರಾಮಸ್ಥರೊಂದಿಗೆ ಚರ್ಚಿಸಿದರು.

ಪ್ರತಿ ಗ್ರಾಮಗಳಲ್ಲಿ ತ್ಯಾಜ್ಯ ನಿರ್ವಹಣೆ ಸಮಿತಿಯನ್ನು ರಚನೆ ಮಾಡಿ ಸಮಿತಿಯ ಮೂಲಕ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಕಾರ್ಯ ಮಾಡಲಾಗುತ್ತಿದೆ. ಆದ್ದರಿಂದ ಗ್ರಾಮೀಣ ಭಾಗದ ಜನರು ಮೂಲದಲ್ಲಿಯೇ ಕಸ ಸಂಗ್ರಹಣೆ ಕಾರ್ಯಕ್ಕೆ ಸಹಕಾರ ನೀಡಬೇಕು ಎಂದರು.

ತಾ.ಪಂ ಸಹಾಯಕ ನಿರ್ದೇಶಕ (ಉಖಾ) ಕುಮಾರ ಪೂಜಾರ, ಪಿಡಿಒ ಮಂಜುಳಾ ಹೊಸಮನಿ, ಬಿ.ಎನ್. ಬಚ್ಚೆನಹಳ್ಳಿ, ಎಸ್‌ಬಿಎಂ ಯೋಜನೆಯ ಸಮಾಲೋಚಕ ಕೃಷ್ಣ ದೊಡ್ಡಮನಿ, ಗ್ರಾ.ಪಂ ಕಾರ್ಯದರ್ಶಿಗಳು, ಮಹಿಳಾ ಒಕ್ಕೂಟದ ಸದಸ್ಯರು ಇದ್ದರು.

## ಮಳೆಯಿಂದ ಅವಾಂತರ: ಮನೆಗಳಿಗೆ ಹಾನಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಂಗಳವಾರ ರಾತ್ರಿಯಿಡೀ ಸುರಿದ ಮಳೆ ರೈತ ಸಮುದಾಯಕ್ಕೆ ಜೀವ ಕಳೆ ತಂದಿದೆ. ಸದ್ಯ ಮುಂಗಾರಿನ ಎಲ್ಲ ಬೆಳೆಗಳು ಫಲ ಬಿಡುವ ಹಂತದಲ್ಲಿದ್ದು, ಕಳೆದ 15-20 ದಿನಗಳಿಂದ ಮಳೆಯಾಗದ್ದರಿಂದ ಬೆಳೆಗಳಿಗೆ ತೇವಾಂಶದ ಕೊರತೆ ಕಾಡುತ್ತಿತ್ತು.

ಈ ವೇಳೆ ಸುರಿದ ಸಮೃದ್ಧ ಮಳೆ ತಗ್ಗು ಪ್ರದೇಶಗಳಲ್ಲಿನ ಒಂದಷ್ಟು ಜಮೀನುಗಳಿಗೆ ಸಣ್ಣ ಪ್ರಮಾಣದಲ್ಲಿ ಹಾನಿ ಮಾಡಿತು. ಆದರೆ ಸದ್ಯ ತೆನೆ ಬಿಡುವ ಹಂತದಲ್ಲಿರುವ ಮೆಕ್ಕೆಜೋಳ, ಕಾಯಿ/ಕಾಳು ಕಟ್ಟುವ ಹಂತದಲ್ಲಿರುವ ಹೆಸರು, ಶೇಂಗಾ, ಹತ್ತಿ, ಮೆಣಸಿನಕಾಯಿ, ಈರುಳ್ಳಿ ಎಲ್ಲ ಬೆಳೆಗಳಿಗೆ ಜೀವಕಳೆ ಬಂದಂತಾಗಿದ್ದು, ರೈತರ ಖುಷಿಗೆ ಕಾರಣವಾಗಿದೆ.

ಲಕ್ಷ್ಮೇಶ್ವರ ಸೇರಿ ತಾಲೂಕಿನ ಎಲ್ಲ ಭಾಗದಲ್ಲಿ ಸುರಿದ ಮಳೆಯಿಂದಾಗಿ ಕೆರೆ-ಕಟ್ಟೆಗಳು, ಕೃಷಿ ಹೊಂಡ, ಹಳ್ಳಗಳು ತುಂಬಿ ಹರಿದಿವೆ. ತಗ್ಗು ಪ್ರದೇಶಗಳಲ್ಲಿನ ಜಮೀನುಗಳಲ್ಲಿ ನೀರು ಹರಿದು, ಸಂಗ್ರಹವಾಗಿ ಒಂದಷ್ಟು ಬೆಳೆ ಜಲಾವೃತವಾಗಿದೆ. ಮೊದಲೇ ತಗ್ಗು ಗುಂಡಿಗಳಿಂದ ಕೂಡಿರುವ ರಸ್ತೆಗಳ ಸ್ಥಿತಿ ಮತ್ತಷ್ಟು ಹದಗೆಟ್ಟಿದ್ದು, ಸಂಚಾರ ಅಸ್ತವ್ಯಸ್ತಗೊಂಡಿದೆ. ಆದರೆ ಬುಧವಾರ ಬೆಳಗಿನಿಂದಲೇ ಬಿಸಿಲ ವಾತಾವರಣದಿಂದ ಜನಜೀವನ ಎಂದಿನಂತಿತ್ತು.

ಮಂಗಳವಾರ ಸಂಜೆಯಿಂದ ಇಡೀ ರಾತ್ರಿ ಸುರಿದ ಮಳೆಯಿಂದ ಕೆಲ ಕಡೆ ಮನೆಯೊಳಗೆ ನೀರು ನುಗ್ಗಿ ಸಮಸ್ಯೆ ಎದುರಿಸುವಂತಾಗಿತ್ತು. ಪಟ್ಟಣದಲ್ಲಿ ಮಹಾದೇವಪ್ಪ ಗೊಜನೂರ, ಗುರುನಾಥ ಸೊರಟೂರ, ಗಂಗಪ್ಪ ಮುಳಗುಂದ, ಹಟೇಲಬಿ ಮೈಸೂರ, ಮನೋಹರ ಚಾವಡಿ ಸೇರಿ 6 ಮನೆಗಳು, ಹರದಗಟ್ಟಿಯಲ್ಲಿ 2 ಮನೆಗಳು ಕುಸಿದಿರುವ ಹಿನ್ನೆಲೆಯಲ್ಲಿ ಸ್ಥಳಕ್ಕೆ ಭೇಟಿ ನೀಡಿದ ಕಂದಾಯ ಇಲಾಖೆಯ ಅಧಿಕಾರಿಗಳು ಪರಿಶೀಲಿಸಿ ಮಾಹಿತಿ ಸಂಗ್ರಹಿಸಿದರು.

### ಮುಂದುವರಿದ ಗದಗ ಸಂಚಾರಿ ಪೊಲೀಸರ ಕಾರ್ಯಾಚರಣೆ!

# ದೋಷಯುಕ್ತ ನಂಬರ್ ಪ್ಲೇಟ್: 56 ಬೈಕ್‌ಗಳು ವಶಕ್ಕೆ!

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ನಂಬರ್ ಪ್ಲೇಟ್ ಇಲ್ಲದ ಹಾಗೂ ದೋಷಪೂರಿತ ನಂಬರ್ ಪ್ಲೇಟ್‌ನೊಂದಿಗೆ ದ್ವಿಚಕ್ರ ವಾಹನ ಓಡಿಸುತ್ತಿದ್ದ ಸವಾರರಿಗೆ ಗದಗ ಪೊಲೀಸರು ಬಿಸಿ ಮುಟ್ಟಿಸಿದ್ದಾರೆ.

ಹೌದು, ಇತ್ತೀಚಿನ ದಿನಗಳಲ್ಲಿ ನಗರದಲ್ಲಿ ಕಾನೂನು ಶಿಕ್ಷೆಯಿಂದ ತಪ್ಪಿಸಿಕೊಳ್ಳಲು ವಾಹನ ಸವಾರರು ದೋಷಪೂರಿತ ನಂಬರ್ ಪ್ಲೇಟ್ ಗಳನ್ನು ಅಳವಡಿಸಿ ಪೊಲೀಸರಿಗೆ ಯಾಮಾರಿಸುತ್ತಿದ್ದರು. ಅಲ್ಲದೇ ಇತ್ತೀಚೆಗೆ ನಗರದಲ್ಲಿ ಹೆಚ್ಚುತ್ತಿರುವ ಕಾನೂನು ಬಾಹಿರ ಚಟುವಟಿಕೆಗಳನ್ನು ತಡೆಗಟ್ಟಲು ಕಾರ್ಯಪ್ರವೃತ್ತರಾದ ಗದಗ ಸಂಚಾರಿ ಪೊಲೀಸರು, ಇದೀಗ ನಂಬರ್ ಪ್ಲೇಟ್ ಇಲ್ಲದ ಹಾಗೂ ದೋಷಪೂರಿತ ನಂಬರ್ ಪ್ಲೇಟ್ ಹೊಂದಿದ್ದ ವಾಹನಗಳ ಚಾಲಕರಿಗೆ ಬಿಸಿ ಮುಟ್ಟಿಸಿದ್ದಾರೆ. ಹೌದು, ಗದಗ-ಬೆಟಗೇರಿ ಅವಳಿ ನಗರದಲ್ಲಿ ಅಕ್ರಮವಾಗಿ ಸಂಚರಿಸುತ್ತಿದ್ದ ದ್ವಿಚಕ್ರ ವಾಹನಗಳ ವಿರುದ್ಧ ಸಂಚಾರಿ



ಪೊಲೀಸರ ತಂಡ ಬುಧವಾರ ಕಟ್ಟುನಿಟ್ಟಿನ ಕಾರ್ಯಾಚರಣೆ ನಡೆಸಿದೆ. ಮೊನ್ನೆ ತಾನೇ ನಡೆಸಿದ ಕಾರ್ಯಾಚರಣೆಯಲ್ಲಿ 40 ಬೈಕ್ ಗಳನ್ನು ಸೀಜ್ ಮಾಡಲಾಗಿತ್ತು. ಇಂದು ಮತ್ತೆ ಕಾರ್ಯಾಚರಣೆ ಮುಂದುವರಿಸಿರುವ ಸಂಚಾರಿ ಪೊಲೀಸರು, 56 ಬೈಕ್ ಗಳನ್ನು ಸೀಜ್ ಮಾಡಿದ್ದಾರೆ. ನಗರದ ಪ್ರಮುಖ ರಸ್ತೆಗಳ ಮೇಲೆ ನೋಂದಣಿ ಸಂಖ್ಯೆ ಇಲ್ಲದೇ ನಂಬರ್ ಪ್ಲೇಟುಗಳನ್ನು ಅಥವಾ ದೋಷಪೂರಿತ ಅಳವಡಿಸಿಕೊಂಡು ಸಂಚರಿಸುತ್ತಿದ್ದ ದ್ವಿಚಕ್ರ ವಾಹನಗಳನ್ನು ತಪಾಸಣೆ ನಡೆಸಲಾಯಿತು. ಅಲ್ಲದೆ, ನಂಬರ್ ಪ್ಲೇಟ್‌ಗಳ ಮೇಲೆ ಅಡ್ಡ ಧೋರಣೆಯ ಸ್ಟಿಕ್ಕರ್‌ಗಳನ್ನು ಅಂಟಿಸಿಕೊಂಡು ಕಾನೂನು ಉಲ್ಲಂಘನೆ ಮಾಡುತ್ತಿರುವ ವಾಹನಗಳ ವಿರುದ್ಧ ಕೂಡ ಕ್ರಮ ಕೈಗೊಳ್ಳಲಾಗಿದೆ. ಸೀಜ್ ಮಾಡಿದ

ವಾಹನಗಳ ಮೋಟಾರ್ ವಾಹನ ಕಾಯ್ದೆಯ ಅಡಿಯಲ್ಲಿ ಕ್ರಮ ಕೈಗೊಳ್ಳಲಾಗಿದೆ. ಹೀಗಾಗಿ ಬೈಕ್ ಮಾಲೀಕರು, ಸಂಚಾರಿ ಠಾಣೆಯಲ್ಲಿ ಸರತಿ ಸಾಲಿನಲ್ಲಿ ನಿಂತು ದಂಡ ಕಟ್ಟುವ ಮೂಲಕ ತಮ್ಮ ನೋಂದಣಿ ಫಲಕಗಳ ದೋಷಗಳನ್ನು ಸರಿಪಡಿಸಿಕೊಳ್ಳುತ್ತಿದ್ದಾರೆ. ಗದಗ ಎಸ್ಪಿ ರೋಹನ್ ಜಗದೀಶ್ ಅವರ ನಿರ್ದೇಶನದಲ್ಲಿ ಡಿ.ಎಸ್.ಪಿ. ಮುರ್ತುಜಾ ಖಾದ್ರಿ ಅವರ ಮಾರ್ಗದರ್ಶನದಲ್ಲಿ ಸಿಪಿಐ ಧೀರಜ್ ಸಿಂಧೆ, ಪಿಎಸ್‌ಐಗಳಾದ ಕಿರಣಕುಮಾರ, ಶ್ರೀಮತಿ ಬಿ.ಎಸ್. ತಳವಾರ ಅವರ ನೇತೃತ್ವದಲ್ಲಿ ಗದಗ ಸಂಚಾರಿ ಠಾಣೆಯ ಸಿಬ್ಬಂದಿ ಈ ಕಾರ್ಯಾಚರಣೆ ನಡೆಸಿದರು.

> **ಪೊಲೀಸರ ಎಚ್ಚರಿಕೆ**
>
> "ಇದೇ ರೀತಿಯಲ್ಲಿ ಮುಂದಿನ ದಿನಗಳಲ್ಲಿ ನೋಂದಣಿ ಸಂಖ್ಯೆ ಇಲ್ಲದ, ತಪ್ಪು ನಂಬರ್ ಪ್ಲೇಟ್ ಹಾಗೂ ಮರೆಮಾಚುವ ರೀತಿಯ ಸ್ಟಿಕ್ಕರ್‌ಗಳ ಬಳಕೆ ಕಂಡು ಬಂದರೆ, ಅಂತಹ ವಾಹನ ಸವಾರರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು" ಎಂದು ಪೊಲೀಸ್ ಇಲಾಖೆ ಪ್ರಕಟಣೆ ಮೂಲಕ ಎಚ್ಚರಿಕೆ ನೀಡಿದೆ.

## ಎಡಿಎಂಕೆ ಸಂಸದನಿಗೆ 10 ಲಕ್ಷ ರೂ. ದಂಡ ವಿಧಿಸಿದ ಸುಪ್ರೀಂ ಕೋರ್ಟ್



**■ವಿಜಯಸಾಕ್ಷಿ ಸುದ್ದಿ, ತಮಿಳುನಾಡು**

ಕಲ್ಯಾಣ ಕಾರ್ಯಕ್ರಮಗಳ ಬಗ್ಗೆ ಜಾಗೃತಿ ಮೂಡಿಸಲು ಘೋಷಿಸಲಾದ 'ಉಂಗಲುಡನ್ ಸ್ಟಾಲಿನ್' (ನಿಮ್ಮ ಸ್ಟಾಲಿನ್) ಯೋಜನೆಗೆ ತಮಿಳುನಾಡು ಸರ್ಕಾರ ಮುಖ್ಯಮಂತ್ರಿ ಎಂ.ಕೆ ಸ್ಟಾಲಿನ್ ಅವರ ಹೆಸರನ್ನು ಬಳಸುವುದನ್ನು ನಿಷೇಧಿಸಿ ಮದ್ರಾಸ್ ಹೈಕೋರ್ಟ್ ನೀಡಿದ್ದ ಮಧ್ಯಂತರ ಆದೇಶವನ್ನು ಸುಪ್ರೀಂ ಕೋರ್ಟ್ ಬುಧವಾರ (ಆಗಸ್ಟ್ 6) ರದ್ದುಗೊಳಿಸಿದೆ.

ಹೈಕೋರ್ಟ್‌ನ ಆದೇಶದ ವಿರುದ್ಧ ದ್ರಾವಿಡ ಮುನ್ನೇತ್ರ ಕಳಗಂ (ಡಿಎಂಕೆ) ಪಕ್ಷ ಹಾಗೂ ತಮಿಳುನಾಡು ಸರ್ಕಾರ ಸಲ್ಲಿಸಿದ್ದ ಅರ್ಜಿಗಳನ್ನು ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ, ನ್ಯಾಯಮೂರ್ತಿಗಳಾದ ಕೆ. ವಿನೋದ್ ಚಂದ್ರನ್ ಮತ್ತು ಎನ್.ವಿ. ಅಂಜಾರಿಯಾ ಅವರನ್ನೊಳಗೊಂಡ ಪೀಠ ಆದೇಶ ಹೊರಡಿಸಿದೆ.

ಸರ್ಕಾರಿ ಕಲ್ಯಾಣ ಯೋಜನೆಗಳಿಗೆ ಜೀವಂತ ವ್ಯಕ್ತಿಗಳು, ಮಾಜಿ ಮುಖ್ಯಮಂತ್ರಿಗಳು, ಪಕ್ಷದ ನಾಯಕರು ಅಥವಾ ರಾಜಕೀಯ ಪಕ್ಷಗಳ ಹೆಸರುಗಳು ಮತ್ತು ಛಾಯಾಚಿತ್ರಗಳನ್ನು ಬಳಸುವುದನ್ನು ಹೈಕೋರ್ಟ್‌ನ ಆದೇಶವು ನಿರ್ಬಂಧಿಸಿತ್ತು.

ದೇಶದಾದ್ಯಂತ ನಾಯಕರ ಹೆಸರಿನಲ್ಲಿ ಇಂತಹ ಯೋಜನೆಗಳು ಸಾಮಾನ್ಯವಾಗಿರುವಾಗ, ಎಐಎಡಿಎಂಕೆ ಸಂಸದ ಸಿ.ವಿ. ಷಣ್ಮುಗಂ (ಹೈಕೋರ್ಟ್‌ನಲ್ಲಿ ಅರ್ಜಿದಾರ) ತಮಿಳುನಾಡು ಸರ್ಕಾರದ ಯೋಜನೆಯನ್ನು ಮಾತ್ರ ಎತ್ತಿ ತೋರಿಸಿದ್ದಕ್ಕಾಗಿ ಸುಪ್ರೀಂ ಕೋರ್ಟ್ ತೀವ್ರ ಟೀಕೆ ವ್ಯಕ್ತಪಡಿಸಿತು. ಎಐಎಡಿಎಂಕೆ ಅಧಿಕಾರಾವಧಿಯಲ್ಲಿ ನಾಯಕರ ಹೆಸರಿನಲ್ಲಿ ಹಲವಾರು ಯೋಜನೆಗಳನ್ನು ಜಾರಿಗೊಳಿಸಲಾಗಿದೆ ಎಂಬ ಡಿಎಂಕೆಯ ವಾದವನ್ನು ನ್ಯಾಯಾಲಯ ಗಮನಿಸಿತು.

ಅರ್ಜಿದಾರರು ಭಾರತ ಚುನಾವಣಾ ಆಯೋಗಕ್ಕೆ ದೂರು ನೀಡಿದ ಮೂರು ದಿನಗಳಲ್ಲಿ ಹೈಕೋರ್ಟ್‌ಗೆ ಧಾವಿಸಿ ಬಂದಿರುದಕ್ಕೆ ನ್ಯಾಯಾಲಯ ಅಸಮಧಾನ ವ್ಯಕ್ತಪಡಿಸಿತು. ರಿಟ್ ಅರ್ಜಿಯು 'ಕಾನೂನಿನಲ್ಲಿ ತಪ್ಪು ಕಲ್ಪನೆ' ಮಾತ್ರವಲ್ಲದೆ ಕಾನೂನಿನ ಪ್ರಕ್ರಿಯೆಯ ದುರುಪಯೋಗವಾಗಿದೆ ಎಂದು ಹೇಳಿತು.

ಹೈಕೋರ್ಟ್‌ನಲ್ಲಿ ಬಾಕಿ ಇರುವ ಅರ್ಜಿಯನ್ನು ಸುಪ್ರೀಂ ಕೋರ್ಟ್ ವರ್ಗಾಯಿಸಿಕೊಂಡಿತು ಮತ್ತು ಅರ್ಜಿದಾರನಿಗೆ 10 ಲಕ್ಷ ರೂ.ಗಳ ದಂಡ ವಿಧಿಸಿ ವಜಾಗೊಳಿಸಿತು. ಒಂದು ವಾರದೊಳಗೆ ತಮಿಳುನಾಡು ಸರ್ಕಾರಕ್ಕೆ ದಂಡದ ಹಣವನ್ನು ಠೇವಣಿ ಇಡಲು ನ್ಯಾಯಾಲಯ ನಿರ್ದೇಶಿಸಿದೆ. ಸರ್ಕಾರವು ಈ ಮೊತ್ತವನ್ನು ದೀನದಲಿತರ ಕಲ್ಯಾಣಕ್ಕಾಗಿ ಬಳಸಬೇಕೆಂದು ನ್ಯಾಯಾಲಯ ಸೂಚಿಸಿದೆ.

## ಸಿಎಂ ಸಿಟಿ ರೌಂಡ್ಸ್: ವಿಕ್ಟೋರಿಯಾ ಆಸ್ಪತ್ರೆಗೆ ಸಿದ್ದರಾಮಯ್ಯ ದಿಢೀರ್ ಭೇಟಿ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಮುಖ್ಯಮಂತ್ರಿ ಸಿದ್ದರಾಮಯ್ಯ ವಿಕ್ಟೋರಿಯಾ ಆಸ್ಪತ್ರೆಗೆ ದಿಢೀರ್ ಭೇಟಿ ನೀಡಿದ್ದಾರೆ. ಕಾರ್ಪೊರೇಷನ್ ಮಾರ್ಗವಾಗಿ ವಿಕ್ಟೋರಿಯಾ ಆಸ್ಪತ್ರೆಗೆ ತೆರಳಿದ ಸಿದ್ದರಾಮಯ್ಯ ಅವರು ಟ್ರಾಫಿಕ್ ನಡುವೆ ಸಂಚರಿಸಿ ವಿಕ್ಟೋರಿಯಾ ಆಸ್ಪತ್ರೆಗೆ ಭೇಟಿ ನೀಡಿದ್ದಾರೆ.

ಇದೇ ವೇಳೆ ಮಹಿಳೆಯೊಬ್ಬರು ಕಣ್ಣೀರಿಡುತ್ತಾ ಸಮಸ್ಯೆ ಹೇಳಿಕೊಂಡ್ರು. ವಿಕ್ಟೋರಿಯಾ ಆಸ್ಪತ್ರೆ ಮುಂದೆಯೇ ಸಿಎಂ ಜನರ ಕಷ್ಟ ಆಲಿಸಿದ್ರು. ಬಳಿಕ ಆಸ್ಪತ್ರೆಯ ಜನರಲ್ ವಾರ್ಡ್ ಗೆ ಸಿದ್ದರಾಮಯ್ಯ ಭೇಟಿ ನೀಡಿದ್ರು. ರೋಗಿಗಳ ಬಳಿ ಕೂಡ ಮಾಹಿತಿ ಪಡೆದಿದ್ದಾರೆ.

ಜನರಲ್ ವಾರ್ಡ್ ನಲ್ಲಿರುವ ರೋಗಿಗಳನ್ನ ಸಿಎಂ ಸಿದ್ದರಾಮಯ್ಯ ಮಾತಾಡಿಸಿದ್ದಾರೆ. ನಿಮಗೆ ಅಲ್ಲಿ ಏನು ತಿಂಡಿ, ಊಟ ಕೊಡ್ತಾರೆ? ಇಲ್ಲಿ ಚಿಕಿತ್ಸೆ ಸರಿಯಾಗಿ ಕೊಡ್ತಿದ್ದಾರಾ? ಎಂದು ರೋಗಿಗಳ ಯೋಗಕ್ಷೇಮ ವಿಚಾರಿಸಿದರು.

## ಲೆಕ್ಕ ಸಹಾಯಕರ ಹುದ್ದೆಗೆ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲೂಕು ಸಂಜೀವಿನಿ ಮಹಿಳಾ ಕಿಸಾನ್ ರೈತ ಉತ್ಪಾದಕ ಕಂಪನಿ ಲಿಮಿಟೆಡ್ ಅವರು ಗದಗ ತಾಲೂಕು ಎಮ್‌ಕೆಪಿಸಿ ಕಚೇರಿಯಲ್ಲಿ ಲೆಕ್ಕ ಸಹಾಯಕರ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ತಮ್ಮ ಬಯೋಡೇಟಾ, ಭಾವಚಿತ್ರ ಮತ್ತು ಸೂಕ್ತ ದಾಖಲಾತಿಗಳನ್ನು ಗೆಜೆಟೆಡ್ ಅಧಿಕಾರಿಗಳ ದೃಢೀಕರಣದೊಂದಿಗೆ ಪೋಸ್ಟ್ ಅಥವಾ ಕೋರಿಯರ್ ಮುಖಾಂತರ ಆಗಸ್ಟ್ 20ರ ಸಂಜೆ 5.30 ರೊಳಗೆ ತಾಲೂಕು ಪಂಚಾಯತಿ, ಗದಗ, ಸಂಜೀವಿನಿ, ಕೆ.ಎಸ್.ಆರ್.ಎಲ್.ಪಿ.ಎಸ್. ತಾಲೂಕು ಅಭಿಯಾನ ಘಟಕ, ಗದಗ ತಾಲೂಕು, ಗದಗ ಜಿಲ್ಲೆ-582101 ದೂರವಾಣಿ ಸಂಖ್ಯೆ 8050147152, 9901909263 ಇಲ್ಲಿಗೆ ತಲುಪುವಂತೆ ಕಳುಹಿಸಬೇಕು. ಅಥವಾ ಖುದ್ದಾಗಿ ಕಚೇರಿಗೆ ಬಂದು ಅರ್ಜಿಗಳನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಗದಗ ತಾಲೂಕು ಪಂಚಾಯತ್ ಕಾರ್ಯಾಲಯ, ದೂರವಾಣಿ ಸಂಖ್ಯೆ 08372-278352 ಸಂಪರ್ಕಿಸಬಹುದಾಗಿದೆ.

### ಹಾನಿಗೊಳಗಾದ ಹೆಸರು ಬೆಳೆ ಪರಿಶೀಲನೆ ನಡೆಸಿದ ಕೃಷಿ ವಿಜ್ಞಾನಿಗಳು

# ಬೆಳೆಹಾನಿ, ಬೆಳೆವಿಮೆ ಪರಿಹಾರ ಕಲ್ಪಿಸಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಲಕ್ಷ್ಮೇಶ್ವರ ಸೇರಿ ತಾಲೂಕಿನ ಯಳವತ್ತಿ, ಗೊಜನೂರ, ಬಟ್ಟೂರ, ಶೆಟ್ಟಿಕೇರಿ ಭಾಗದಲ್ಲಿನ ವಿಪರೀತ ಕೀಟಬಾಧೆಯಿಂದ ಹಾನಿಗೊಳಗಾದ ಹೆಸರು ಬೆಳೆಯನ್ನು ಬುಧವಾರ ಕೃಷಿ ವಿಜ್ಞಾನಿಗಳು ಪರಿಶೀಲಿಸಿದರು.

ತಾಲೂಕಿನಾದ್ಯಂತ ಈ ವರ್ಷ ಮೆಕ್ಕೆ ಜೋಳದ ಹೊರತಾಗಿ ಹೆಸರು ಬೆಳೆದಿದ್ದಾರೆ. ಆದರೆ ಹವಾಮಾನ ವೈಪರಿತ್ಯ, ಜಿಟಿಜಿಟಿ ಮಳೆಯಿಂದ ಕೀಟಗಳ ಹಾವಳಿ ಹೆಚ್ಚಾಗಿ ಪೂರಕ ವಾತಾವರಣ ಇಲ್ಲದ್ದರಿಂದ ನಿಯಂತ್ರಣ ಸಾಧ್ಯವಾಗದೇ ಹೆಸರು ಬೆಳೆ ಕೀಟಬಾಧೆಗೆ ತುತ್ತಾಗಿದೆ. ದುಬಾರಿ ಬೆಲೆಯ ಕ್ರಿಮಿನಾಶಕ ಸಿಂಪಡಿಸಿದರೂ ನಿಯಂತ್ರಣಕ್ಕೆ ಬಾರದೇ ರೈತರು ಕೈಚೆಲ್ಲಿ ಕುಳಿತಿದ್ದಾರೆ.



ಈ ಹಿನ್ನೆಲೆಯಲ್ಲಿ ಬೆಳೆ ಪರಿಶೀಲನೆಗೆ ಆಗಮಿಸಿದ ಕೃಷಿ ವಿಜ್ಞಾನಿಗಳ ತಂಡದವರು ರೈತರಿಗೆ ಮಾಹಿತಿ ನೀಡಿದರು. ಈ ವೇಳೆ ಸಸ್ಯಕೀಟ ಶಾಸ್ತ್ರಜ್ಞ ಡಾ. ಸಿ.ಎಂ. ರಫಿ ವಿವರಣೆ ನೀಡಿ, ಈ ವರ್ಷ ಮುಂಗಾರಿನ ಉತ್ತಮ ಮಳೆಯಿಂದ ಹೆಸರು ಬೆಳೆ ಸಮೃದ್ಧವಾಗಿಯೇ ಬೆಳೆಯಿತು. ಆದರೆ ಮೋಡ ಮುಸುಕಿದ ವಾತಾವರಣ, ತುಂತುರು ಮಳೆಯಿಂದ ಕೀಟಬಾಧೆ ಹೆಚ್ಚಾಯಿತು. ಮುಖ್ಯವಾಗಿ ಹೆಲಿಕೋವರ್ಪಾ ಆರ್ಮಿಗೇರಾ ಎಂಬ ವಿನಾಶಕಾರಿ ಕೀಟ ಬೆಳೆಯ ಮೊಗ್ಗು, ಹೂವು ಬಿಡುವ ಹಂತದಲ್ಲಿಯೇ ಬೆಳೆಯನ್ನು ತೀವ್ರವಾಗಿ ಬಾಧಿಸುತ್ತದೆ. ರೈತರು ಈ ಸಂದರ್ಭದಲ್ಲಿ ಸೂಕ್ಷ್ಮವಾಗಿ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದರು.

ಹತೋಟಿಗಾಗಿ ಕಾಯಿ ತಿನ್ನುವ ಕೀಡೆಗಳ ಕ್ಲೋರಾಂಥೋನೀಲಿಪ್ರೋಲ್ 0.2 ಎಂಎಲ್ ಅಥವಾ ಅಂಪ್ಲಿಗೋ 0.4 ಎಂಎಲ್ ಲೀಟರ್ ನೀರಿಗೆ ಅಥವಾ ಕ್ಲೋರಾಂಥೋನೀಲಿಪ್ರೋಲ್ + ಲ್ಯಾಂಬ್ಡಾಸೈಲೊಥ್ರಿನ್ 0.4 ಎಂಎಲ್ ಲೀಟರ ನೀರಿಗೆ ಅಥವಾ ಸ್ಪೈನೋಸ್ಯಾಡ 45 ಎಸ್‌ಸಿ 0.2 ಎಂಲ್ ಲೀ ನೀರಿಗೆ ಅಥವಾ ಫ್ಲ್ಯೂಬೆಂಡಿಮೈಡ 20% ಡಜಿ 0.2 ಗ್ರಾಂ/ಲೀ ಅಥವಾ ಸೈನೆಟೋರಾಮ್ 11.7 ಎಸ್‌ಸಿ 0.4 ಎಂಎಲ್/ ಲೀ ನೀರಿಗೆ ಸಿಂಪರಣೆ ಮಾಡಬೇಕು.

ಗೋವಿನ ಜೋಳದಲ್ಲಿ ಸೈನಿಕ ಹುಳುಭಾದೆ ಹತೋಟಿಗಾಗಿ ಇಮಾಮೆಕ್ಟಿನ್ ಬೆಂಜೊಯೆಟ 5 ಎಸ್‌ಜಿ 0.3 ಗ್ರಾಂ/ಲೀ ನೀರಿಗೆ ಅಥವಾ ಕ್ಲೋರಾಂಥೋನೀಲಿಪ್ರೋಲ್ 18.5% ಎಸ್‌ಸಿ, 0.4 ಎಂಎಲ್ ಲೀಟರ ನೀರಿಗೆ ಅಥವಾ, ಸೈನೆಟೋರಾಮ್ 11.7 ಎಸ್‌ಸಿ ಹಾಗೂ ಪ್ರತಿ ಎಕರೆಗೆ 10 ಮೋಹಕ ಬಲೆಗಳನ್ನು ಅಳವಡಿಸುವುದು. ರೈತರು ಪ್ರತಿ ಎಕರೆಗೆ ಕಡ್ಡಾಯವಾಗಿ 200 ಲೀ ದ್ರಾವಣ ಸಿಂಪರಣೆ ಮಾಡಬೇಕು. ಗಿಡದ ಎಲ್ಲಾ ಭಾಗಗಳಿಗೆ ತಲುಪುವ ಹಾಗೆ ಸಿಂಪರಣೆ ಮಾಡಬೇಕು. ಈ ಕೀಟಗಳು ರಾತ್ರಿಯಲ್ಲಿ ದಾಳಿ ಮಾಡುವ ಗುಣ ಹೊಂದಿರುವದರಿಂದ ಔಷಧ ಸಿಂಪರಣೆಯನ್ನು ಸಾಯಂಕಾಲ 4 ಗಂಟೆಯ ನಂತರ ಅಥವಾ ಬೆಳಗ್ಗೆ 10 ಗಂಟೆಯ ಒಳಗಡೆ ಮಾಡುವುದರಿಂದ ಹತೋಟಿ ಮಾಡಬಹುದು ಎಂದು ವಿವರಿಸಿದರು.

ಅಣ್ಣಿಗೇರಿ ಕೃಷಿ ಸಂಶೋಧನಾ ಕೇಂದ್ರದ ಬೇಸಾಯ ಶಾಸ್ತ್ರಜ್ಞ ಎಸ್.ವೈ. ಬಾಲ್ಕುಂದೆ, ತಳಿ ವರ್ಧಕರಾದ ಬಿ.ಎನ್. ಮೋಟಗಿ, ಆರ್.ಎಸ್. ಅಣ್ಣಿಗೇರಿ, ಸಹಾಯಕ ಕೃಷಿ ನಿರ್ದೇಶಕರಾದ ಮೇಘನಾ ಎಂ.ನಾಡಿಗೇರ, ಕೃಷಿ ಅಧಿಕಾರಿ ಎಸ್.ಬಿ. ಲಮಾಣಿ, ಮಹಾಬಲೇಶ್ವರ ಪೂಜಾರ, ರೈತರಾದ ಚನ್ನಬಸಪ್ಪ ಷಣ್ಮುಖಿ, ಬಿ.ಎಸ್. ಪಾಟೀಲ, ವಿಜಯಪ್ರಕಾಶ ಬೂದಿಹಾಳ ಮುಂತಾದವರಿದ್ದರು.

> ಚನ್ನಬಸಪ್ಪ ಷಣ್ಮುಖಿ ಮಾತನಾಡಿ, ಈ ವರ್ಷ ರೈತರ ಪ್ರಮುಖ ವಾಣಿಜ್ಯ ಬೆಳೆ ಹೆಸರಿಗೆ ದುಬಾರಿ ಬೆಲೆಯ ಕ್ರಿಮಿನಾಶಕವನ್ನು ನಾಲ್ಕೈದು ಬಾರಿ ಸಿಂಪಡಿಸಿದರೂ ಕೀಟಭಾದೆ, ರೋಗಬಾಧೆಯಿಂದ ಸಂಪೂರ್ಣ ಹಾಳಾಗಿದೆ. ಸರ್ಕಾರ ಬೆಳೆಹಾನಿ, ಬೆಳೆವಿಮೆ ಪರಿಹಾರ ಕಲ್ಪಿಸಬೇಕೆಂದು ಆಗ್ರಹಿಸಿದರು.

## ಆ.12ಕ್ಕೆ ಶ್ರೀ ದಾನಮ್ಮದೇವಿ ಜೀವನದರ್ಶನ ಪ್ರವಚನ

**■ವಿಜಯಸಾಕ್ಷಿ ಸುದ್ದಿ, ಗದಗ**

ನಾಗಾವಿ ಗ್ರಾಮದ ಸಾಮಾಜಿಕ ಹೋರಾಟಗಾರ ಬಸವಣ್ಣೆಯ್ಯ ಹಿರೇಮಠ ಅವರ ಕುಟುಂಬ ಪರಿವಾರದಿಂದ ಪ್ರತಿ ವರ್ಷ ತಮ್ಮ ನಿವಾಸದಲ್ಲಿ ಶ್ರೀಸೋಮೇಶ ಹಿರೇಮಠ ಪ್ರತಿಷ್ಠಾನ, ನಮೋ ಯೋಗ ಸಮುದಾಯ ಭವನ ಸಮಿತಿಯಿಂದ ಶ್ರಾವಣ ಮಾಸದಲ್ಲಿ ಗುಡ್ಡಾಪುರ ದಾನಮ್ಮ ದೇವಿಯ ಜೀವನ ದರ್ಶನ ಶ್ರವಣ ಮಾಡುತ್ತಾ ಬರುತ್ತಿದ್ದು, ಆಗಸ್ಟ್ 12ರ ಮುಂಜಾನೆ 8 ಗಂಟೆಯಿಂದ 10 ಗಂಟೆಯವರೆಗೆ ವಿಜಯಪುರದ ಆಧ್ಯಾತ್ಮಿಕ ಐಶ್ವರ್ಯ ಪವನಕುಮಾರ ಪತ್ತಾರ ಅವರು ಶ್ರೀಗುಡ್ಡಾಪುರ ದಾನಮ್ಮದೇವಿ ಜೀವನದರ್ಶನ ಪ್ರವಚನವನ್ನು ಮಾಡಲಿದ್ದಾರೆ.

ವೇ.ಮೂ ಮೃತ್ಯುಂಜಯ ಸ್ವಾಮೀಜಿ ಹಿರೇಮಠ, ಬೆಳದಡಿಯ ವೇ.ಮೂ. ಶಂಭುಲಿಂಗಯ್ಯನವರು ಕಲ್ಮಠ, ವೇ.ಮೂ ಮಂಜಯ್ಯ ಶಾಸ್ತ್ರಿಗಳು ಹಿರೇಹಾಳ ಅವರ ಸಮ್ಮುಖ ವಹಿಸುವರು. ತಾ.ಪಂ ಮಾಜಿ ಅಧ್ಯಕ್ಷ ಬಿ.ಎಸ್. ಚಿಂಚಲಿ ಅಧ್ಯಕ್ಷತೆ ವಹಿಸುವರು. ನಾಗಾವಿಯ ಬಸನಗೌಡ್ರ ಶಾಂತಗೌಡ್ರ ಪಾಟೀಲ, ಸೊರಟೂರಿನ ರಾಮಣ್ಣ ಕಮ್ಮಾರ ಉಪಸ್ಥಿತರಿರುವರು.

ವೀರೇಶ್ವರ ಪುಣ್ಯಾಶ್ರಮ ದಾವಣಗೆರೆ ಕಲಾವಿದರಾದ ಬಸವರಾಜ ಎಸ್.ಹೊಂಬಳ, ರಾಜಶೇಖರ್ ಎಸ್.ಸಂಗಳಕರ ಹುಬ್ಬಳ್ಳಿ ಸಂಗೀತ ಸೇವೆ ನೀಡುವರು. ಇದೇ ಸಂದರ್ಭದಲ್ಲಿ ಮಹಿಳೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಜರುಗಲಿದೆ.

ಈ ಕಾರ್ಯಕ್ರಮದಲ್ಲಿ ಭಕ್ತ ಜನತೆ ಭಾಗವಹಿಸಬೇಕು ಎಂದು ಸೋಮೇಶ ಹಿರೇಮಠ ಪ್ರತಿಷ್ಠಾನದ ಪ್ರಧಾನ ಕಾರ್ಯದರ್ಶಿ ಕುಮಾರಗೌಡ ಪಾಟೀಲ ವಿನಂತಿಸಿದ್ದಾರೆ.

## ಭವಿಷ್ಯದಲ್ಲಿ ಉತ್ತಮ ಶಿಕ್ಷಕರಾಗಿ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಈಗ ತರಬೇತಿ ಹಂತದಲ್ಲಿರುವ ನೀವು ಮುಂಬರುವ ದಿನಗಳಲ್ಲಿ ಉತ್ತಮ ಶಿಕ್ಷಕರಾಗಿ ಈ ಸಮಾಜಕ್ಕೆ ಆಸ್ತಿಯಾಗಿ ಎಂದು ಕೋಟುಮಚಗಿಯ ಶ್ರೀ ಸೋಮೇಶ್ವರ ಪ್ರೌಢಶಾಲೆಯ ಮುಖ್ಯ ಶಿಕ್ಷಕಿ ಟಿ.ಜಿ. ಕಂಬಾಳಿಮಠ ಹೇಳಿದರು.

ಸಮೀಪದ ಕೋಟುಮಚಗಿಯ ಶ್ರೀ ಸೋಮೇಶ್ವರ ಪ್ರೌಢಶಾಲೆಯಲ್ಲಿ ನಡೆದ ಪ್ರಶಿಕ್ಷಣಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಕಳೆದ ಮೂರು ತಿಂಗಳಿನಿಂದ ನಮ್ಮ ಪ್ರೌಢಶಾಲೆಯಲ್ಲಿ ಪ್ರಶಿಕ್ಷಣ ತರಬೇತಿಯನ್ನು ಸಮರ್ಪಕವಾಗಿ ಪೂರೈಸಿದ್ದೀರಿ. ನಿಮ್ಮ ಈ ತರಬೇತಿಯು ಮುಕ್ತಾಯದ ಹಂತದಲ್ಲಿದೆ. ನಿಮ್ಮ ಪರೀಕ್ಷೆಗಳು ಮುಗಿದರೆ ಮುಂದೆ ಶಿಕ್ಷಕ ಹುದ್ದೆಗೆ ಅರ್ಜಿ ಸಲ್ಲಿಸಲು, ಟಿಇಟಿ ಪರೀಕ್ಷೆಗೆ ಅರ್ಹರಾಗುತ್ತೀರಿ. ನೀವು ಎಲ್ಲಿಯೇ ಕೆಲಸ ಮಾಡಿರಿ, ಅಲ್ಲಿನ ವಾತಾವರಣಕ್ಕೆ ಹೊಂದಿಕೊಂಡು ಅಲ್ಲಿನ ಮಕ್ಕಳ ಪ್ರೀತಿ, ವಿಶ್ವಾಸಗಳಿಸಿ ಉತ್ತಮ ಶಿಕ್ಷಕರೆಂಬ ಹೆಸರು ಪಡೆಯಿರಿ ಎಂದರು.

ಶಿಕ್ಷಕಿ ವಿ.ಎಸ್. ಚಲವಾದಿ ಮಾತನಾಡಿ, ಪೂರ್ವ ಜನ್ಮದ ಪುಣ್ಯವಿದ್ದಾಗ ಮಾತ್ರ ಶಿಕ್ಷಕರಾಗುವ ಯೋಗ ದೊರಕುತ್ತದೆ. ಅಂತಹ ಪುಣ್ಯ ನಿಮಗೆ ಸಿಕ್ಕಿದೆ. ಈ ಪುಣ್ಯವನ್ನು ಸದುಪಯೋಗಪಡಿಸಿಕೊಂಡು ಭವಿಷ್ಯದಲ್ಲಿ ಸಮಾಜ ಗುರುತಿಸುವಂತಹ ಶಿಕ್ಷಕರಾಗಿ ನಿಮ್ಮ ಸೇವೆಯನ್ನು ಸಲ್ಲಿಸಿರಿ ಎಂದು ಹಾರೈಸಿದರು.

ಸಭೆಯನ್ನುದ್ದೇಶಿಸಿ ಶಿಕ್ಷಕ ಪಿ.ಎಚ್. ತಾಂಬೋಟಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಪ್ರಶಿಕ್ಷಣಾರ್ಥಿಗಳಾದ ಕಾವೇರಿ ಮ್ಯಾಗೇರಿ, ರಮೇಶ ಬಂಡಿಹಾಳ, ಬಸವರಾಜ ತಳಕಲ್ಲ ಮತ್ತು ಅನಿಲ ಮ್ಯಾಗೇರಿಯವರನ್ನು ಸನ್ಮಾನಿಸಿ ಬೀಳ್ಕೊಡಲಾಯಿತು. ಪ್ರಶಿಕ್ಷಣಾರ್ಥಿಗಳು ಶಾಲೆಗೆ 25 ಲೋಟಗಳನ್ನು ಕಾಣಿಕೆಯಾಗಿ ನೀಡಿದರು. ಕಾರ್ಯಕ್ರಮದ ಅಂಗವಾಗಿ ಮಕ್ಕಳಿಗೆ ಏರ್ಪಡಿಸಲಾಗಿದ್ದ ರಂಗೋಲಿ, ಮೆಹಂದಿ ಹಾಕುವ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನಗಳನ್ನು ವಿತರಿಸಲಾಯಿತು.

## ಹೈನೋದ್ಯಮ, ಪಶುಸಂಗೋಪನೆಯಲ್ಲಿ ಉದ್ಯಮಶೀಲತಾ ತರಬೇತಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಹುಲಕೋಟಿಯ ಐ.ಸಿ.ಎ.ಆರ್.ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರ, ಪಶು ಸಂಗೋಪನಾ ಶ್ರೇಷ್ಠತೆ ಕೇಂದ್ರ ಬೆಂಗಳೂರು ಇವರ ಸಂಯುಕ್ತ ಆಶ್ರಯದಲ್ಲಿ ಹುಲಕೋಟಿಯ ಐ.ಸಿ.ಎ.ಆರ್ ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರದಲ್ಲಿ ಮೂರು ದಿನಗಳ ಹೈನೋದ್ಯಮ ಹಾಗೂ ಪಶುಸಂಗೋಪನೆಯಲ್ಲಿ ಉದ್ಯಮಶೀಲತೆ ತರಬೇತಿ ಕಾರ್ಯಕ್ರಮದ ಉದ್ಘಾಟನಾ ಸಮಾರಂಭ ನೆರವೇರಿತು.

ಗದಗ ಜಿಲ್ಲೆಯ ಪಶುಪಾಲನೆ ಹಾಗೂ ಪಶು ವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕ ಡಾ. ಎಚ್.ಬಿ. ಹುಲಗಣ್ಣವರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ರೈತರು ಕೃಷಿಯಲ್ಲಿ ವೈಜ್ಞಾನಿಕ ಪಶು ಸಂಗೋಪನೆ ಅಳವಡಿಸಿಕೊಂಡಾಗ ಹೆಚ್ಚಿನ ಆದಾಯ ಪಡೆಯಬಹುದು. ಈ ನಿಟ್ಟಿನಲ್ಲಿ ಪ್ರಸಕ್ತ ತರಬೇತಿ ಕಾರ್ಯಕ್ರಮ ರೈತರಿಗೆ ಅತ್ಯಂತ ಅನುಕೂಲಕರವಾಗಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಪಶುಸಂಗೋಪನಾ ಅಧಿಕಾರಿ ಡಾ. ಎಸ್. ಬಾಲರಾಜ್, ತಮ್ಮ ಕೇಂದ್ರದ ವತಿಯಿಂದ ಪಶು ಸಂಗೋಪನೆಯಲ್ಲಿ ಉದ್ಯೋಗಾವಕಾಶ ಕಲ್ಪಿಸಲು ಹಲವಾರು ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದು, ಈ ತರಬೇತಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕೆಂದು ಹೇಳಿದರು. ಹುಲಕೋಟಿ ಎಸ್.ಬಿ.ಐ.-ಎ.ಎಸ್. ಎಫ್-ಆರ್.ಸೆ.ಟಿಯ ನಿರ್ದೇಶಕ ಶಿವಕುಮಾರ ಎಸ್ ಮಾತನಾಡಿ, ಪಶು ಸಂಗೋಪನೆ ಉದ್ಯಮವನ್ನು ಪ್ರಾರಂಭಿಸಲು ಬ್ಯಾಂಕ್‌ಗಳಿಂದ ಆರ್ಥಿಕ ನೆರವು ಹಾಗೂ ಸಾಲ ಸೌಲಭ್ಯಗಳಿದ್ದು, ರೈತರು ಹಣಕಾಸಿನ ನೆರವು ಪಡೆದು ಹಂತ-ಹಂತವಾಗಿ ಪಶು ಸಂಗೋಪನೆ ಉದ್ಯಮವನ್ನು ಮುನ್ನಡೆಸಬೇಕು ಎಂದು ತಿಳಿಸಿದರು.

ಕೇಂದ್ರದ ಮುಖ್ಯಸ್ಥರಾದ ಡಾ. ಸುಧಾ ವ್ಹಿ.ಮಂಕಣಿ ಮಾತನಾಡಿ, ಹೈನುಗಾರಿಕೆ ಹಾಗೂ ಪಶು ಸಂಗೋಪನೆ ಉಪಕಸಬುಗಳು ಹೆಚ್ಚು ಲಾಭದಾಯಕ ಉದ್ಯಮಗಳಾಗಿದ್ದು, ಶಿಬಿರಾರ್ಥಿಗಳು ಈ ತರಬೇತಿಯಲ್ಲಿ ಸಕ್ರಿಯವಾಗಿ ಭಾಗವಹಿಸಿ ಹೈನು ಉತ್ಪನ್ನಗಳ ಮೌಲ್ಯವರ್ಧನೆ ಕುರಿತು ಹೆಚ್ಚಿನ ಮಾಹಿತಿ ಪಡೆಯಬೇಕು ಎಂದರು. ಡಾ. ಪ್ರವೀಣ ಎಸ್. ಕರಿಕಟ್ಟಿ ಸ್ವಾಗತಿಸಿದರು. ಡಾ. ವಿನಾಯಕ ನಿರಂಜನ ನಿರೂಪಿಸಿ ವಂದಿಸಿದರು.

## ಮನ-ಮನೆಗೆ ಮಾಚಿದೇವ ಕಾರ್ಯಕ್ರಮ



**■ವಿಜಯಸಾಕ್ಷಿ ಸುದ್ದಿ, ಗದಗ**

ಮಡಿವಾಳ ಮಾಚಿದೇವರ ಮೂರ್ತಿ ಹಾಗೂ ವಚನ ಪಲ್ಲಕ್ಕಿ ಉತ್ಸವ, ಜಗದ್ಗುರು ಶ್ರೀ ಮಾಚಿದೇವ ಮಹಾಸಂಸ್ಥಾನ ಮಠ ಚಿತ್ರದುರ್ಗ ಕಾಯಕ ಜನೋತ್ಸವ-2026 ಕಾರ್ಯಕ್ರಮವು ಚಿತ್ರದುರ್ಗದಲ್ಲಿ 2026ರ ಜನವರಿ 5ರಂದು ನೆರವೇರುವುದು. ಈ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಜಿಲ್ಲಾಕೇಂದ್ರಗಳಲ್ಲಿ ಶ್ರಾವಣ ಮಾಸದ ನಿಮಿತ್ತ ವಿಶೇಷ ಕಾರ್ಯಕ್ರಮ ಜರುಗುತ್ತಿದೆ.

ತನ್ನಿಮಿತ್ತ ಮಂಗಳವಾರ ಜಗದ್ಗುರು ತೋಂಟದಾರ್ಯ ಕಲ್ಯಾಣ ಕೇಂದ್ರದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮವನ್ನು ಚಿತ್ರದುರ್ಗದ ಜಗದ್ಗುರು ಡಾ. ಶ್ರೀ ಬಸವ ಮಾಚಿದೇವ ಮಹಾಸ್ವಾಮಿಗಳು ಉದ್ಘಾಟಿಸಿ ಮಾತನಾಡಿ, ಮಡಿವಾಳ ಸಮಾಜವು ಎಲ್ಲಾ ಸಮಾಜಕ್ಕಿಂತ ಚಿಕ್ಕದಾಗಿದ್ದು, ತುಳಿತಕ್ಕೆ ಒಳಗಾಗಿದೆ. ಸಮಾಜ ಬಾಂಧವರು ಒಂದುಗೂಡಿ ಸರ್ಕಾರದ ಯೋಜನೆಗಳನ್ನು ಪಡೆದುಕೊಂಡು ತಮ್ಮ ಜೀವನ ಮಟ್ಟವನ್ನು ಸುಧಾರಿಸಿಕೊಳ್ಳಬೇಕು.

ಮಡಿವಾಳ ಸಮಾಜವನ್ನು ಪರಿಶಿಷ್ಟ ಜಾತಿಗೆ ಸೇರಿಸಬೇಕೆಂದು ಹಕ್ಕೊತ್ತಾಯ ಮಾಡುವ ಕುರಿತು ಮುಂಬರುವ ದಿನಗಳಲ್ಲಿ ಚಿತ್ರದುರ್ಗದಲ್ಲಿ ಬೃಹತ್ ಸಮಾವೇಶವನ್ನು ನಡೆಸಲು ಉದ್ದೇಶಿಸಲಾಗಿದೆ. ಕಾರಣ, ಗದಗ ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಸಂಚರಿಸಿ ಮನೆ ಮನೆಗೆ ತೆರಳಿ ಆಹ್ವಾನ ನೀಡಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಎಂ.ಕೆ. ಹನಮಂತಪ್ಪ, ದುರಗೇಶ ಮಡಿವಾಳರ, ಫಕ್ಕೀರಪ್ಪ ಮಡಿವಾಳರ, ಶಿವಪ್ಪ ಮಡಿವಾಳರ, ದ್ಯಾಮಣ್ಣ ಮಡಿವಾಳರ, ನಿಂಬಣ್ಣ ಮಡಿವಾಳರ, ದೇವಪ್ಪ ಮಡಿವಾಳರ, ಜಗದೀಶ ಮಡಿವಾಳರ, ರಾಘವೇಂದ್ರ ಮಡಿವಾಳರ, ಕವಿತಾ ಮಡಿವಾಳರ ಸೇರಿದಂತೆ ಗದಗ-ಬೆಟಗೇರಿ, ಮಡಿವಾಳ ಸಮಾಜದ ಗುರು-ಹಿರಿಯರು, ಯುವಕರು ಉಪಸ್ಥಿತರಿದ್ದರು.

## ಸಾಮೂಹಿಕ ಯಜುರ್ ಉಪಾಕರ್ಮ ಆ.9ಕ್ಕೆ

**■ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ಪಟ್ಟಣದ ಹೊಸಪೇಟ ಚೌಕ ಓಣಿಯ ಶ್ರೀ ಕಾಳಿಕಾ ದೇವಿ ದೇವಸ್ಥಾನದಲ್ಲಿ ಆಗಸ್ಟ್ 9ರ ಬೆಳಿಗ್ಗೆ 7 ಗಂಟೆಗೆ ಸಾಮೂಹಿಕ ಯಜುರ್ (ಋಗ್) ಉಪಾಕರ್ಮ ಹಮ್ಮಿಕೊಳ್ಳಲಾಗಿದೆ.

ಯಜುರ್ ಉಪಾಕರ್ಮ ಆಚರಣೆಯಲ್ಲಿ ಭಾಗವಹಿಸುವವರು ಆ. 7ರ ರಾತ್ರಿ 8 ಗಂಟೆಯೊಳಗೆ ಕಮಿಟಿಯ ಶ್ರೀಧರ ಕೊಣ್ಣೂರ (9448027319), ವಿಜಯರಾಘವೇಂದ್ರ ಲಕ್ಷ್ಮಣ ಬೆಂತೂರ (9916689828), ಮಂಜುನಾಥ ಲಿಂಗಾಚಾರ್ಯ ಅಕ್ಕಸಾಲಿಗ (9886728098), ವಿಶ್ವನಾಥ ನಾಗಲಿಂಗಪ್ಪ ಪತ್ತಾರ (9686000323) ಇವರಲ್ಲಿ ಹೆಸರು ನೊಂದಾಯಿಸಿಕೊಳ್ಳಬೇಕು.

ಆಚರಣೆಯಲ್ಲಿ ಭಾಗವಹಿಸುವವರು ಕಡ್ಡಾಯವಾಗಿ ಪಂಚೆ-ಶಲ್ಯ ಧರಿಸಿ, ಪಂಚಪಾತ್ರೆ, ಉದ್ಧರಣೆ, ತಟ್ಟೆ, ಜನಿವಾರದ ಕಟ್ಟು ಇತ್ಯಾದಿ ಪೂಜಾ ಸಾಮಗ್ರಿಗಳನ್ನು ತರಬೇಕು. ಬೆಟಗೇರಿ-ಗದಗ ಹಾಗೂ ಉಭಯ ಪಟ್ಟಣದ ಸುತ್ತಮುತ್ತಲಿನ ಗ್ರಾಮಗಳ ವಿಶ್ವಕರ್ಮ ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ದೇವಸ್ಥಾನದ ಕಮಿಟಿಯ ಅಧ್ಯಕ್ಷ ಶ್ರೀಧರ ಎಸ್.ಕೊಣ್ಣೂರ, ಪ್ರಧಾನ ಕಾರ್ಯದರ್ಶಿ ನಾಗಲಿಂಗಪ್ಪ ಐ.ಪತ್ತಾರ ಪತ್ರಿಕಾ ಪ್ರಕಟನೆಯ ಮೂಲಕ ವಿನಂತಿಸಿದ್ದಾರೆ.

## ಬೇರ್‌ಫೂಟ್ ಟೆಕ್ನಿಷಿಯನ್‌ಗಳಿಂದ ಇಓರಿಗೆ ಮನವಿ



**■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಗಜೇಂದ್ರಗಡ ತಾಲೂಕಿನ 13 ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೇರ್‌ಫೂಟ್ ಟೆಕ್ನಿಷಿಯನ್ (ಬಿಎಫ್‌ಟಿ)ಗಳಿಗೆ ಕಳೆದ 5 ತಿಂಗಳಿಂದ ಸಂಬಳವಾಗದೇ ಆರ್ಥಿಕ ಸಂಕಷ್ಟಕ್ಕೆ ಒಳಗಾಗಿರುವ ಬಗ್ಗೆ ತಾಲೂಕು ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರ ಅವರಿಗೆ ಮನವಿ ಸಲ್ಲಿಸಿದರು.

ಗಜೇಂದ್ರಗಡ ತಾಲೂಕಿನಲ್ಲಿ ಕಾರ್ಯ ನಿರ್ವಹಿಸುತ್ತಿರುವ 4 ಬೇರ್‌ಫೂಟ್ ಟೆಕ್ನಿಷಿಯನ್‌ಗಳ ಸಹಿತ ಕರ್ನಾಟಕ ರಾಜ್ಯ ನರೇಗಾ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘ ಮತ್ತು ಕರ್ನಾಟಕ ರಾಜ್ಯ ಬೇರ್‌ಫೂಟ್ ಟೆಕ್ನಿಷಿಯನ್ ಕ್ಷೇಮಾಭಿವೃದ್ಧಿ ಸಂಘದಿಂದ ಸಲ್ಲಿಸಲಾದ ಈ ಮನವಿಯಲ್ಲಿ, ಕಳೆದ ಮಾರ್ಚ್ ತಿಂಗಳಿನಿಂದ ಸಂಬಳ ಪಾವತಿ ಯಾಗದ ಇರುವುದರಿಂದ ತೀವ್ರ ಆರ್ಥಿಕ ತೊಂದರೆ ಎದುರಾಗಿದೆ ಎಂದು ತಿಳಿಸಲಾಗಿದೆ.

ಬೇರ್‌ಫೂಟ್ ಟೆಕ್ನಿಷಿಯನ್‌ಗಳ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ, ಬಾಕಿ ಉಳಿಸಿಕೊಂಡಿರುವ ಸಂಬಳವನ್ನು ತಕ್ಷಣ ಪಾವತಿಸಲು ಮತ್ತು ಭವಿಷ್ಯದಲ್ಲಿ ಸಕಾಲದಲ್ಲಿ ವೇತನ ಒದಗಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕಾರ್ಯನಿರ್ವಾಹಕ ಅಧಿಕಾರಿಗಳಲ್ಲಿ ಮನವಿ ಮಾಡಿದ್ದಾರೆ.

ಕಾರ್ಯ ನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರ ಮನವಿ ಸ್ವೀಕರಿಸಿ, ಸಂಬಳ ಇಲ್ಲದೆ ಬದುಕು ನಡೆಸುವುದು ಕಷ್ಟ. ತಾಂತ್ರಿಕ ದೋಷದ ಹಿನ್ನೆಲೆಯಲ್ಲಿ ಸಂಬಳ ತಡವಾಗಿದೆ. ಶೀಘ್ರವಾಗಿ ನಿಮ್ಮ ಸಮಸ್ಯೆಯನ್ನು ಮೇಲಧಿಕಾರಿಗಳ ಗಮನಕ್ಕೆ ತರುತ್ತೇನೆ ಎಂದರು.

ಬಿಎಫ್‌ಟಿಗಳಾದ ಚಂದ್ರಕಾಂತ ಲಮಾಣಿ, ಶಂಕರಗೌಡ ಪಾಟೀಲ್, ರವಿ ಹೊಂಬಳ, ಜ್ಯೋತಿ ವಡ್ಡರ ಹಾಗೂ ನರೇಗಾ ಸಿಬ್ಬಂದಿಗಳಾದ ಗುರು ಪಕೀರಗೌಡ, ಸುನೀಲ ಶಿರೋಳ, ಪ್ರಕಾಶ್ ಮ್ಯಾಕಲ್, ಅಜಯ್ ಹೂಗಾರ, ಪ್ರವೀಣ ಗಾಮನಕಟ್ಟಿ ಮುಂತಾದವರು ಹಾಜರಿದ್ದರು.

# ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಜಿಲ್ಲಾ ವಲಯ ಯೋಜನೆಯಡಿ ಗ್ರಾಮೀಣ ಭಾಗದ ಕುಶಲಕರ್ಮಿಗಳಿಗೆ ಉಚಿತವಾಗಿ ಹೊಲಿಗೆಯಂತ್ರ ( ಮಹಿಳೆಯರಿಗೆ ಮಾತ್ರ ) ಬಡಗಿತನ, ಧೋಬಿ, ಕ್ಷೌರಿಕ ಹಾಗೂ ಗೌಂಡಿ ಸುಧಾರಿತ ಉಪಕರಣಗಳನ್ನು ಪೂರೈಸಲು www.Gadag.nic.in ವೆಬ್ ಸೈಟ್ ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವ ಕೊನೆಯ ಸೆಪ್ಟೆಂಬರ್ 30 ಆಗಿದ್ದು, ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಚೇರಿ, ಗ್ರಾಮೀಣ ಮತ್ತು ಸಣ್ಣ ಉದ್ಯಮ ವಿಭಾಗ, ಜಿಲ್ಲಾ ಪಂಚಾಯತ್, ಜಿಲ್ಲಾ ಆಡಳಿತ ಭವನ, ಕೊಠಡಿ ಸಂಖ್ಯೆ 109, ಹುಬ್ಬಳ್ಳಿ ರಸ್ತೆ, ಗದಗ ದೂರವಾಣಿ ಸಂಖ್ಯೆ 08372-220506 ಸಂಪರ್ಕಿಸಬಹುದಾಗಿದೆ. ಆನ್‌ಲೈನ್‌ನಲ್ಲಿ ಸಲ್ಲಿಸಬೇಕಾದ ದಾಖಲಾತಿಗಳು: ಫೋಟೋ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಿಂದ ಹೊಲಿಗೆ/ಬಡಗಿತನ/ ಧೋಬಿ/ ಕ್ಷೌರಿಕ ಹಾಗೂ ಗೌಂಡಿ ವೃತ್ತಿ ಮಾಡುವ ಬಗ್ಗೆ ದೃಢೀಕರಣ ಪತ್ರ, ವಿಕಲಚೇತನ ಪ್ರಮಾಣ ಪತ್ರ, ತೃತೀಯ ಲಿಂಗ ಪ್ರಮಾಣ ಪತ್ರ , ಹೊಲಿಗೆ ತರಬೇತಿ ಪ್ರಮಾಣ ಪತ್ರ, ಪಡಿತರ ಚೀಟಿ/ ಚುನಾವಣಾ ಗುರುತಿನ ಚೀಟಿ/ ಆಧಾರ್ ಕಾರ್ಡ್

# ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ರೋಣ

ರೋಣ ತಾಲೂಕಾ ವೀರಶೈವ ಪಂಚಾಚಾರ್ಯ ವಿವಿಧೋದ್ದೇಶಗಳ ಸಹಕಾರಿ ಸಂಘ ನಿಯಮಿತ ರೋಣ ವತಿಯಿಂದ ಪ್ರತಿಭಾವಂತ ವೀರಶೈವ ಪಂಚಮಸಾಲಿ ವಿದ್ಯಾರ್ಥಿಗಳಿಂದ ಪ್ರತಿಭಾ ಪುರಸ್ಕಾರಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. 2025ರ ಎಪ್ರಿಲ್, ಮೇ ತಿಂಗಳಲ್ಲಿ ಜರುಗಿದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.75 ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ. 60 ಅಥವಾ ಅದಕ್ಕಿಂತ ಹೆಚ್ಚಿನ ಅಂಕಗಳನ್ನು ಪಡೆದ ವೀರಶೈವ ಪಂಚಮಸಾಲಿ ವಿದ್ಯಾರ್ಥಿಗಳು ಆ.30ರೊಳಗೆ ಸಹಕಾರಿ ಸಂಘದಲ್ಲಿ ಅರ್ಜಿಗಳನ್ನು ಪಡೆದು ಭರ್ತಿ ಮಾಡಿ ನೀಡಬೇಕು ಎಂದು ಸಂಘದ ಪ್ರಕಟನೆಯಲ್ಲಿ ತಿಳಿಸಿದೆ.

### ವಿಶೇಷ ಚೇತನರ ನ್ಯೂನ್ಯತೆಗಳ ಕುರಿತ ಅರಿವು ಕಾರ್ಯಕ್ರಮದಲ್ಲಿ ಕವಿತಾ ಬೇಲೇರಿ

# ವಿಶೇಷ ಚೇತನ ಮಕ್ಕಳು ಭಾರವಲ್ಲ



■ವಿಜಯಸಾಕ್ಷಿ ಸುದ್ದಿ, ಗದಗ

ಸಾಮಾನ್ಯ ಶಾಲೆಯಲ್ಲಿ ಒಂದೇ ಪಠ್ಯಕ್ರಮವನ್ನು, ಸಾಮಾನ್ಯ ಶಿಕ್ಷಕರು ಬೋಧನಾ ವಿಧಾನದಲ್ಲಿ ಸ್ವಲ್ಪ ಮಾರ್ಪಾಡುಗಳೊಂದಿಗೆ ಸಾಮಾನ್ಯ ಮಕ್ಕಳೊಂದಿಗೆ ವಿಶೇಷ ಅಗತ್ಯತೆಯುಳ್ಳ ಮಕ್ಕಳಿಗೆ ಯಾವುದೇ ತಾರತಮ್ಯ ಇಲ್ಲದೇ ಕಲಿಸುವ ವ್ಯವಸ್ಥೆಯೇ ಸಮನ್ವಯ ಶಿಕ್ಷಣವಾಗಿದೆ ಎಂದು ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಹೇಳಿದರು.

ಅವರು ಗದುಗಿನ ಶ್ರೀರಾಮ ನಗರದ ಸರ್ಕಾರಿ ಶಾಲೆ ನಂ. 18ರ ವಿಶೇಷ ಚೇತನ ಮಕ್ಕಳ ಪಾಲಕರ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.

ವಿಶೇಷ ಅಗತ್ಯತೆಯುಳ್ಳ ಮಕ್ಕಳ ಬಗೆಗೆ ನಾವೆಲ್ಲರೂ ಧನಾತ್ಮಕ ಮನೋಭಾವನೆ ಬೆಳೆಸಿಕೊಳ್ಳಬೇಕು. ಸಮಾಜವನ್ನು ಧೈರ್ಯ ಹಾಗೂ ಆತ್ಮವಿಶ್ವಾಸದಿಂದ ಎದುರಿಸಿ ಸ್ವಾವಲಂಬಿ ಜೀವನ ನಡೆಸಲು ಸಾಧ್ಯವಾಗುವಂತೆ ಪ್ರೇರೆಪಿಸಬೇಕು. ಇಂತಹ ಮಕ್ಕಳು ಭಾರವಲ್ಲ ಎಂಬ ಭಾವನೆಯೊಂದಿಗೆ ನಾವೆಲ್ಲರೂ ಸೇರಿ ವಿಶೇಷ ಮಕ್ಕಳನ್ನು ಮುಖ್ಯವಾಹಿನಿಗೆ ತರಬೇಕು ಎಂದರು.

ಅತಿಥಿಗಳಾಗಿ ಆಗಮಿಸಿದ್ದ ಗದಗ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಉಪನ್ಯಾಸಕಿ ಸುಧಾ ಬೆನಕಲ್ಲ ಮಾತನಾಡಿ, ವಿಶೇಷ ಮಕ್ಕಳಿಗೆ ಹಾಗೂ ಪಾಲಕರಿಗೆ ಸ್ವಚ್ಛತೆ ಬಗೆಗೆ ತಿಳುವಳಿಕೆ ನೀಡಬೇಕು. ಊಟ-ಉಪಚಾರದ ರೀತಿಗಳನ್ನು ಹೇಳಿಕೊಡಬೇಕು. ಶಾಲೆಯಲ್ಲಿ ಕಲಿಸುವುದರ ಜೊತೆಗೆ ಮನೆಯಲ್ಲಿಯೂ ಮಕ್ಕಳ ಕಲಿಕೆಗೆ ಒತ್ತು ನೀಡಬೇಕು. ಈ ಮಕ್ಕಳ ತಾಯಂದಿರು ಬಹಳ ಸಹನೆಯಿಂದ ಮಕ್ಕಳನ್ನು ಜೋಪಾನ ಮಾಡುತ್ತಿದ್ದು, ಅವರು ಅಭಿನಂದನಾರ್ಹರು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸಂಪನ್ಮೂಲ ವ್ಯಕ್ತಿ ಎಸ್.ವಿ. ಚಳಗೇರಿ, ಪಾಲಕರು ಮಾನಸಿಕವಾಗಿ ಸದೃಢರಾಗಬೇಕು. ಎಲ್ಲರಂತೆ ನನ್ನ ಮಗು ಸಾಮಾನ್ಯವೆಂಬ ಮನೋಭಾವ ಬೆಳೆಸಿಕೊಳ್ಳಬೇಕು.

> ಶಾಲೆಯ ಮುಖ್ಯೋಪಾಧ್ಯಾಯ ಎಸ್.ಆರ್. ಕಿನ್ನಾಳ ಮಾತನಾಡಿ, ನ್ಯೂನ್ಯತೆ ಎಂಬುದು ಶಾಪವಲ್ಲ. ಇಂತವರು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿ ಸಾಧಕರಾಗಿದ್ದು, ಇವರ ಸಂಖ್ಯೆ ಗಣನೀಯವಾಗಿದೆ. ಅವರನ್ನು ಮಾದರಿಯಾಗಿ ಇಟ್ಟುಕೊಂಡು ಪಾಲಕರು ಮಕ್ಕಳ ಮುಂದಿನ ಭವಿಷ್ಯವನ್ನು ರೂಪಿಸಿ ಅವರನ್ನು ಸ್ವಾವಲಂಬಿಗಳನ್ನಾಗಿ ಮಾಡಲು ಮಕ್ಕಳನ್ನು ಶಾಲೆಯತ್ತ ಕರೆತರಬೇಕು ಎಂದರು.

ಶಾಲೆಯು ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಪೂರಕವಾಗಿ ಕಾರ್ಯ ನಿರ್ವಹಿಸುತ್ತಿದೆ. ವಿಶೇಷ ಮಕ್ಕಳು ನಗುತ್ತ ಬಂದು ನಲಿದು, ಕಲಿಯುವ ಅವಕಾಶಗಳಿದ್ದು, ಅವರನ್ನು ಶಾಲೆಗೆ ಕರೆತರುವ ಪ್ರಯತ್ನ ನಡೆಯಬೇಕಿದೆ ಎಂದರು.

ಅತಿಥಿಗಳಾದ ಸುಧಾ ಬೆನಕಲ್, ಸುವರ್ಣ ಗುರಮ್ಮನವರ ವಿಶೇಷ ಚೇತನ ಮಕ್ಕಳ ತಾಯಂದಿರರಿಗೆ ಸೀರೆಗಳನ್ನು ನೀಡಿ ಗೌರವಿಸಿದರು. ಪಾಲಕರಾದ ಜ್ಯೋತಿ ಕರಿಯವರ, ದುರಗವ್ವ ಕಿನ್ನರಿ, ಸುಮಿತ್ರಾ ವಿಭೂತಿ, ಸುಜಾತಾ ಕಲ್ಯಾಣದವರ, ಮುದುಕವ್ವ ವಿಭೂತಿ ಮುಂತಾದ ಪಾಲಕರು ಮಗುವಿನ ವರ್ತನೆ ಕುರಿತು ಚರ್ಚಿಸಿದರು. ಮಕ್ಕಳಿಗೆ ಯುಡಿಐಡಿ ಕಾರ್ಡ್ ಮಾಡುವ ಕುರಿತು ತಿಳಿಸಲಾಯಿತು.

ಕಾರ್ಯಕ್ರಮದಲ್ಲಿ ವಿಶೇಷ ಚೇತನರ 21 ನ್ಯೂನ್ಯತೆಯ ವಿಧಗಳು ಹಾಗೂ ಅವುಗಳ ಕುರಿತು ತಿಳುವಳಿಕೆ ನೀಡಲಾಯಿತು. ಶಾಲಾ ಶಿಕ್ಷಕರು, ಪಾಲಕರು, ಪೋಷಕರು, ಎಸ್‌ಡಿಎಂಸಿ ಸದಸ್ಯರು ಪಾಲ್ಗೊಂಡಿದ್ದರು.

# ವ್ಯಸನ ಮುಕ್ತ ಸಮಾಜಕ್ಕಾಗಿ ಕೈಜೋಡಿಸಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಿ. ಅದು ನಮ್ಮೆಲ್ಲರ ಕರ್ತವ್ಯ ಎಂದು ಉಪನ್ಯಾಸಕ ಡಿ.ಎಮ್. ನಾಗರೇಶಿ ತಿಳಿಸಿದರು.

ಅವರು ಸ್ಥಳೀಯ ಶ್ರೀ ಅನ್ನದಾನೇಶ್ವರ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ 'ವ್ಯಸನ ಮುಕ್ತ ಭಾರತ ದಿನಾಚರಣೆ' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಇಂದಿನ ದಿನಮಾನಗಳಲ್ಲಿ ವಯಸ್ಕರರು ಹಾಗೂ ಮಕ್ಕಳು ಚಿಕ್ಕ ವಯಸ್ಸಿನಲ್ಲೇ ದುಶ್ಚಟಗಳಿಗೆ ಬಲಿಯಾಗುತ್ತಿದ್ದಾರೆ. ಆದ್ದರಿಂದ ಇಂತಹ ದುಶ್ಚಟಗಳಿಗೆ ಬಲಿಯಾಗದಂತೆ ಅವರಲ್ಲಿ ಅರಿವು ಮೂಡಿಸುವುದು ಬಹಳ ಮುಖ್ಯವಾಗಿದೆ. ಯುವಕರು ಧೂಮಪಾನ, ಮದ್ಯಪಾನಗಳನ್ನು ಬಿಟ್ಟು ಆರೋಗ್ಯವಂತ ಜೀವನ ಕಟ್ಟಿಕೊಳ್ಳಬೇಕು. ಕಾಲೇಜು ದಿನಗಳಲ್ಲಿ ಕುತೂಹಲಕ್ಕೆ, ಸ್ನೇಹಿತರ ಪ್ರಚೋದನೆಯಿಂದ ಮಾದಕ ವಸ್ತುಗಳ ಬಳಕೆ ಪ್ರಾರಂಭವಾಗುತ್ತದೆ. ನಂತರ ಇದು ನಿಯಮಿತ ಬಳಕೆಯಾಗುತ್ತದೆ. ಇದರ ದುರುಪಯೋಗ ಪ್ರಾರಂಭವಾಗಿ ನಮ್ಮ ದೇಹದ ಮೇಲೆ ದುಷ್ಪರಿಣಾಮ ಬೀರಲು ಪ್ರಾರಂಭಿಸುತ್ತದೆ. ಇದಕ್ಕೆ ದಾಸರಾಗಿ ವ್ಯಸನಕ್ಕೆ ಒಳಗಾಗುತ್ತಾರೆ. ಈ ಹಂತದಲ್ಲಿ ಇದರಿಂದ ಹೊರಕ್ಕೆ ಬರುವುದು ಹೆಚ್ಚು ಕಷ್ಟವಾಗುತ್ತದೆ ಮತ್ತು ಇಂತಹ ವಸ್ತುಗಳ ಬಳಕೆಯಿಂದ ಕ್ಯಾನ್ಸರ್ ಮತ್ತು ಇತರೆ ರೋಗಗಳು ಬರುವ ಸಾಧ್ಯತೆಗಳು ಹೆಚ್ಚಾಗಿರುತ್ತವೆ. ಆದ್ದರಿಂದ ಇಂತಹ ದುಶ್ಚಟಗಳಿಂದ ದೂರವಿದ್ದು ವ್ಯಸನ ಮುಕ್ತ ಸಮಾಜಕ್ಕೆ ಎಲ್ಲರೂ ಮುಂದಾಗಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಉಪನ್ಯಾಸಕರಾದ ಎಫ್.ಎನ್. ಹುಡೇದ, ಎಂ. ನದಾಫ್ ಮಾತಾಡಿದರು. ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಎಂ.ಎಸ್. ಹೊನ್ನವಾಡ, ಶಿವಾನಂದ ಕುರಿ, ಎ.ಆಯ್. ಪಾಪಣ್ಣವರ, ಮಾರುತಿ ಹೂಗಾರ ಮುಂತಾದವರು ಉಪಸ್ಥಿತರಿದ್ದರು.

### ಹಾಲಕೆರೆಯಲ್ಲಿ ಶಿವಾನುಭವಗೋಷ್ಠಿ, ಹಿರಿಯ ತಾಯಂದಿರ ಸನ್ಮಾನ ಕಾರ್ಯಕ್ರಮದಲ್ಲಿ ಲೀಲಾ ಕಾರಟಗಿ ಅಭಿಮತ

# ಸಂಸ್ಕಾರ ಇಲ್ಲದಿದ್ದರೆ ಬದುಕು ಶೂನ್ಯ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಬದುಕಿನಲ್ಲಿ ಸಂಸ್ಕಾರಗಳಿರಬೇಕು. ಸಂಸ್ಕಾರಗಳೇ ಇಲ್ಲದಿದ್ದರೆ ಆ ಬದುಕು ಶೂನ್ಯ ಮತ್ತು ಅರ್ಥಪೂರ್ಣವಿಲ್ಲದ ಬದುಕಾಗುತ್ತದೆ. ಆದ್ದರಿಂದ ತಾಯಂದಿರು ತಮ್ಮ ಮಕ್ಕಳಿಗೆ ಮೊದಲು ಸಂಸ್ಕಾರಗಳನ್ನು ಕಲಿಸಬೇಕು ಎಂದು ಶಿಕ್ಷಣ ಚಿಂತಕಿ ಲೀಲಾ ಕಾರಟಗಿ ಹೇಳಿದರು.

ಸಮೀಪದ ಹಾಲಕೆರೆಯ ಶ್ರೀಮಠದಲ್ಲಿ ಜರುಗಿದ ಬೆಳ್ಳಿರಥೋತ್ಸವದ ನಂತರ ನಡೆದ ಶಿವಾನುಭವಗೋಷ್ಠಿ, ಹಿರಿಯ ತಾಯಂದಿರ ಸನ್ಮಾನ ಕಾರ್ಯಕ್ರಮದಲ್ಲಿ ಅವರು 'ಮಕ್ಕಳ ಸಮಗ್ರ ಬೆಳವಣಿಗೆಯಲ್ಲಿ ಮಹಿಳೆಯ ಪಾತ್ರ' ಕುರಿತು ವಿಶೇಷ ಉಪನ್ಯಾಸ ನೀಡಿದರು.

ಮಹಿಳೆಗೆ ವಿಶೇಷ ಸ್ಥಾನಮಾನ ನೀಡಿದ ದೇಶ ನಮ್ಮದು. ತಾಯಿ ಸಾಕ್ಷಾತ್ ದೇವರ ಸ್ವರೂಪಿಯಾಗಿದ್ದಾಳೆ. ಅಕ್ಕ-ತಂಗಿ, ಹೆಂಡತಿ, ಸೊಸೆ, ತಾಯಿ ಹೀಗೆ ವಿವಿಧ ಹಂತಗಳನ್ನು ದಾಟಿ ಬರುವ ಆಕೆ ಎಲ್ಲದರಲ್ಲಿಯೂ ತ್ಯಾಗದ ಪ್ರತಿರೂಪವೇ ಆಗಿದ್ದಾಳೆ. ಸಮಾಜ ಅವಳ ಪ್ರತಿಭೆಗೆ, ಸಾಧನೆಗೆ ಪ್ರೋತ್ಸಾಹ ನೀಡಬೇಕು. ಅವಳನ್ನು ಕಟ್ಟಿ ಹಾಕುವ ಕೆಲಸವಾಗಬಾರದು. ತಾಯಂದಿರು ಎಂದಿಗೂ ಮಕ್ಕಳ ಅಂಕಗಳ ಬಗ್ಗೆ ಯೋಚಿಸದೆ ಅವರಲ್ಲಿ ಮೌಲ್ಯಗಳ ಬಗ್ಗೆ ಯೋಚಿಸಬೇಕು. ಜೀವನದ ಮೌಲ್ಯಗಳನ್ನು ಮಕ್ಕಳಲ್ಲಿ ಬೆಳೆಸಲು ತಾಯಂದಿರು ಮುಂದಾಗಬೇಕು. ಮಗುವಿನ ಪ್ರತಿ ಹೆಜ್ಜೆಯಲ್ಲಿಯೂ ತಾಯಿಯ ಗಮನವಿರಬೇಕು. ಹೆಣ್ಣು ತನ್ನ ಪರಿಪೂರ್ಣ ಜೀವನವನ್ನು ಇತರರ ಉದ್ಧಾರಕ್ಕಾಗಿಯೆ ಮೀಸಲಿಡುತ್ತಾಳೆಎಂಬುದನ್ನು ಎಲ್ಲರೂ ಗಮನಿಸಬೇಕೆಂದರು.

> ಶ್ರೀ ಮುಪ್ಪಿನ ಬಸವಲಿಂಗ ಸ್ವಾಮೀಜಿ ಆಶೀರ್ವಚನ ನೀಡಿ, ಬದುಕನ್ನು ಎಂದಿಗೂ ನಿರರ್ಥಕ ಮಾಡಿಕೊಳ್ಳಬೇಡಿ. ನಿಮ್ಮ ಮನದಲ್ಲಿ ಜ್ಞಾನದ ಸೆಲೆಯಿದ್ದರೆ ನಿಮ್ಮ ಬದುಕು ಸಾರ್ಥಕವಾಗುತ್ತದೆ. ಈ ಜ್ಞಾನ ಸತ್ಸಂಗದಿಂದ ಬರುತ್ತದೆ. ಆದ್ದರಿಂದ ಎಂದಿಗೂ ಸತ್ಸಂಗದಲ್ಲಿ ಕಾಲ ಕಳೆಯಬೇಕೆಂದು ಊರಲ್ಲಿ ಜಾತ್ರೆ, ಶಿವಾನುಭವಗೋಷ್ಠಿಯಂತಹ ಕಾರ್ಯಗಳು ಜರುಗುತ್ತವೆ. ಇವುಗಳಲ್ಲಿ ನೀವು ಏಕಾಗ್ರ ಮನಸ್ಸಿನಿಂದ ಪಾಲ್ಗೊಳ್ಳಿ ಎಂದರು.

ಈ ಸಂದರ್ಭದಲ್ಲಿ ಶ್ರೀಗಳು ಹಿರಿಯ ತಾಯಂದಿರ ಸನ್ಮಾನವನ್ನು ನೆರವೇರಿಸಿದರು. ಒಳಬಳ್ಳಾರಿ ಸುವರ್ಣಗಿರಿ ಮಠದ ಶ್ರೀ ಸಿದ್ಧಲಿಂಗ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಿದ್ದರು. ನಿಡಗುಂದಿಕೊಪ್ಪದ ಶ್ರೀ ಅಭಿನವ ಚನ್ನಬಸವ ಸ್ವಾಮೀಜಿ ನೇತೃತ್ವ ಮತ್ತು ನಾಡಿನ ಅನೇಕ ಹರ-ಗುರು-ಚರ ಮೂರ್ತಿಗಳು ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಎಸ್.ಎಸ್. ಸಾರಂಗಮಠ ವಿರಚಿತ 'ಹಾಲಕೆರೆಯ ಶ್ರೀ ಮಹಾತಪಸ್ವಿ ಅನ್ನದಾನೇಶ್ವರ ಮಹಿಮೆ' ನಾಟಕ ಮತ್ತು ಗಿರಿರಾಜ ಹೊಸಮನಿಯವರು ಬರೆದ 'ಹಾಲಕೆರೆಯಿಂದ ಹಿಮಾಲಯದವರೆಗೆ' ಕೃತಿಗಳು ಲೋಕಾರ್ಪಣೆಗೊಂಡವು. ಇದೇ ಸಂದರ್ಭದಲ್ಲಿ ಡಾ. ಕಲ್ಲಯ್ಯ ಹಿರೇಮಠ ನೇತೃತ್ವದ 'ಬೆತ್ತದ ಅಜ್ಜ' ಕಿರುಚಿತ್ರವೂ ಬಿಡುಗಡೆಗೊಂಡಿತು.

ರೋಣದ ಅಕ್ಕನ ಬಳಗದ ಅಧ್ಯಕ್ಷೆ ಅನ್ನಪೂರ್ಣಮ್ಮ ಜಿ.ಪಾಟೀಲ ಪಾಲ್ಗೊಂಡಿದ್ದರು. ಬೆಳ್ಳಿರಥೋತ್ಸವದ ನಿಮಿತ್ತ ಧಾರವಾಡದ ಎಸ್‌ಡಿಎಂ ನಾರಾಯಣ ಹಾರ್ಟ್ ಸೆಂಟರ್‌ನವರಿಂದ ಉಚಿತ ಹೃದಯ ರೋಗ ತಪಾಸಣಾ ಶಿಬಿರ ಜರುಗಿತು. ಬೆಳಿಗ್ಗೆ ಮಕ್ಕಳಿಗಾಗಿ ಅಕ್ಷರಾಭ್ಯಾಸದ ಪ್ರಾರಂಭ, 501 ಮುತ್ತೈದೆಯರಿಗೆ ಉಡಿ ತುಂಬುವುದು, ಮರಳಿ ಮಣ್ಣಿಗೆ ಜಾಗೃತಿ ಅಭಿಯಾನ ಕಾರ್ಯಕ್ರಮಗಳು ಜರುಗಿದವು.

# ಉಚಿತ ಸಾಮೂಹಿಕ ವಿವಾಹ ಸೆ.14ಕ್ಕೆ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಈದ್ ಮಿಲಾದ ಹಬ್ಬದ ಅಂಗವಾಗಿ ಸೆಪ್ಟೆಂಬರ್ 14ರಂದು ಮುಳಗುಂದ ಪಟ್ಟಣದಲ್ಲಿ ಅಂಜುಮನ್-ಎ-ಇಸ್ಲಾಂ ಆಡಳಿತ ಮಂಡಳಿ ಹಾಗೂ ಖಿದ್ಮತ್-ಎ-ಮಿಲ್ಲತ್ ಗ್ರೂಪ್ ವತಿಯಿಂದ ಪ್ರಥಮ ಬಾರಿಗೆ ಮುಸ್ಲಿಂ ಸಮಾಜದವರ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸಂಸ್ಥೆಯ ಅಧ್ಯಕ್ಷರಾದ ತಾಜುದ್ದೀನ ಕಿಂಡ್ರಿ ತಿಳಿಸಿದರು.

ಬುಧವಾರ ಪ್ರವಾಸಿ ಮಂದಿರದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮಾಜದ ಕಡು ಬಡಕಟುಂಬದ ವಧು-ವರರಿಗೆ ಪ್ರತಿ ಜೋಡಿಗೆ ಉಚಿತ 4 ಆಣೆ ತೂಕದ ಬಂಗಾರದ ತಾಳಿ, ಸಮವಸ್ತ್ರ, ಕಾಲುಂಗರ ಹಾಗೂ ವಧು-ವರ ಕಡೆಯಿಂದ ಬಂಧು-ಬಾಂಧವರಿಗೆ ಊಟದ ವ್ಯವಸ್ಥೆ ಮಾಡಲಾಗುವುದು. ಸರಕಾರದಿಂದ ಸಿಗುವ (ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯಿಂದ ಸಮೂಹಿಕ ವಿವಾಹದ ಪ್ರತಿ ಜೋಡಿಗೆ 50 ಸಾವಿರ ರೂ) ಸೌಲಭ್ಯ ಒದಗಿಸಿಕೊಡಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಉಪಾಧ್ಯಕ್ಷ ಎ.ಡಿ. ಮುಜಾವರ, ಹೈದರಾಲಿ ಖವಾಸ, ಮುನ್ನಾ ಢಾಲಾಯತ, ದಾವಲಸಾಬ ಲಕ್ಷ್ಮೇಶ್ವರ, ದಾವೂದ್ ಜಮಾಲ, ಲಾಲಷಾಪೀರ ಮಕಾನದಾರ, ರಾಜೇಸಾಬ ಸೈಯದ ಬಡೆಹುಸೇನ ಅಕ್ಕಿ, ಇಸಾಕ್ ಹೊಸಮನಿ, ಮಾಬುಲಿ ದುರ್ಗಿಗುಡಿ, ಚಮನಸಾಬ ಹಾದಿಮನಿ, ಮೆಹಬೂಬ ದುರ್ಗಿಗುಡಿ, ಮೌಲಾಲಿ ಢಾಲಾಯತ್ ಮುಂತಾದವರಿದ್ದರು.

# ಇನ್ಮುಂದೆ ಅಲ್ಪಸಂಖ್ಯಾತರ ಸಾಮೂಹಿಕ ವಿವಾಹಕ್ಕೆ 50 ಸಾವಿರ ರೂ. ಗಿಫ್ಟ್: ಸಚಿವ ಜಮೀರ್


■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಆರ್ಥಿಕವಾಗಿ ಹಿಂದುಳಿದ ಅಲ್ಪಸಂಖ್ಯಾತ ಸಮುದಾಯದವರ ಸರಳ ವಿವಾಹಕ್ಕೆ ಪ್ರೋತ್ಸಾಹ ನೀಡಲು ಪ್ರತಿ ಜೋಡಿಗೆ 50 ಸಾವಿರ ರೂ. ಕೊಡುವ ಕಾರ್ಯಕ್ರಮಕ್ಕೆ ಸರ್ಕಾರದ ಮಂಜೂರಾತಿ ದೊರೆತಿದೆ. ಅಲ್ಪಸಂಖ್ಯಾತರ ಸಾಮೂಹಿಕ ವಿವಾಹಕ್ಕೆ 50 ಸಾವಿರ ಕೊಡುತ್ತೇವೆ. ಸಿಎಂ ಸಿದ್ದರಾಮಯ್ಯ ಬಜೆಟ್‌ನಲ್ಲಿ ಘೋಷಣೆ ಮಾಡಿದ್ದರು, ಅದು ಆದೇಶ ಆಗಿದೆ ಎಂದು ಸಚಿವ ಜಮೀರ್ ಅಹ್ಮದ್ ಹೇಳಿದ್ದಾರೆ.

ನಗರದಲ್ಲಿ ಮಾತನಾಡಿದ ಅವರು, ಮೌಲಾನಾ ಅಬ್ದುಲ್ ಕಲಾಂ ಸ್ಕೂಲ್ ಸೇರಿದಂತೆ ಪ್ರತಿಭಾನ್ವಿತರಿಗೆ ಸಹಾಯ ಮಾಡುತ್ತೇವೆ. ಇಲಾಖೆ ವತಿಯಿಂದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಧನ ಸಹಾಯ ಮಾಡುತ್ತಿದ್ದೇವೆ ಎಂದರು.

214 ವಿದ್ಯಾರ್ಥಿಗಳಿಗೆ ವೈಯಕ್ತಿಕವಾಗಿ ಲ್ಯಾಪ್ ಟಾಪ್ ಕೊಡುತ್ತಿದ್ದೇನೆ. ಸಾಮೂಹಿಕ ವಿವಾಹ ಮಾಡವುದು ಬಡವರು, ಹೀಗಾಗಿ ಅಲ್ಪಸಂಖ್ಯಾತರಲ್ಲಿ ಸಾಮೂಹಿಕ ವಿವಾಹ ಮಾಡುವವರಿಗೂ ಸಹಾಯ ಮಾಡುತ್ತೇವೆ ಎಂದು ತಿಳಿಸಿದರು.

# ನಿಧನ



## ಕುಶಾಲ ಹುಬ್ಬಳ್ಳಿ

**ಗದಗ:** ಇಲ್ಲಿನ ಹಾಳದಿಬ್ಬ ಓಣಿಯ ನಿವಾಸಿ ಕುಶಾಲ ನಾಗಪ್ಪ ಹುಬ್ಬಳ್ಳಿ ಅವರು ದಿ.5-08-2025ರಂದು ಮಂಗಳವಾರ ಮಧ್ಯಾಹ್ನ ತಮ್ಮ 70ನೇ ವಯಸ್ಸಿನಲ್ಲಿ ನಿಧನರಾದರು. ಮೃತರ ಅಂತಿಮ ಯಾತ್ರೆ 7-08-2025ರ ಗುರುವಾರ ಮಧ್ಯಾಹ್ನ 2: 00 ಗಂಟೆಗೆ ವ್ಹಿ.ಎನ್.ಟಿ ರೋಡ್ ಹಾಳದಿಬ್ಬ ಓಣಿಯಲ್ಲಿನ ತಮ್ಮ ಸ್ವಗೃಹದಿಂದ ಹೊರಡುವುದು.

ಮೃತರು ಪತ್ನಿ, ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧುಗಳನ್ನು ಅಗಲಿದ್ದಾರೆ.



## ವಿರೂಪಾಕ್ಷಪ್ಪ ಯರಾಶಿ

**ಡಂಬಳ:** ಗ್ರಾಮದ ರಡ್ಡಿ ಸಮಾಜದ ಹಿರಿಯರು, ಎಪಿಎಂಸಿಯ ಮಾಜಿ ಅಧ್ಯಕ್ಷರಾಗಿದ್ದ ವಿರೂಪಾಕ್ಷಪ್ಪ ಶಂಕ್ರಪ್ಪ ಯರಾಶಿ(67) ಬುಧವಾರ ನಿಧನರಾದರು.

ಮೃತರು ಪತ್ನಿ, ಪುತ್ರ, ಸಹೋದರರು, ಸಹೋದರಿಯರು ಸೇರಿದಂತೆ ಅಪಾರ ಬಂದು ಬಳಗವನ್ನು ಅಗಲಿದ್ದಾರೆ.

ಮೃತರ ಅಂತ್ಯಕ್ರಿಯೆ ದಿ.07-08-2025ರ ಗುರುವಾರ ಮುಂಜಾನೆ 11ಗಂಟೆಗೆ ಜರುಗಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

**ಸಂತಾಪ:** ಎಪಿಎಂಸಿ ಮಾಜಿ ಅಧ್ಯಕ್ಷ ವಿರೂಪಾಕ್ಷಪ್ಪ ಯರಾಶಿ ಅವರ ನಿಧನಕ್ಕೆ ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು, ಶಾಸಕ ಜಿ.ಎಸ್.ಪಾಟೀಲ, ಮಾಜಿ ಸಚಿವ ಎಸ್.ಎಸ್.ಪಾಟೀಲ್, ಮುಖಂಡರಾದ ವಿ.ವಿ.ಸೋಮನಕಟ್ಟಿಮಠ, ಎಮ್.ಆರ್.ಪಾಟೀಲ್, ವಿ.ಟಿ.ಮೇಟಿ, ಜಿ.ಎಸ್.ಕೊರ್ಲಹಳ್ಳಿ, ಕರಬಸಪ್ಪ ಹಂಚಿನಾಳ, ವಾಯ್.ಎನ್.ಗೌಡರ, ಬಿ.ಎಸ್.ಬಂಡಿ, ಮಹೇಶ ಗಡಗಿ, ನಾಗೇಶ ಹುಬ್ಬಳ್ಳಿ, ಬಸುರಡ್ಡಿ ಬಂಡಿಹಾಳ, ಮುದ್ಲಿಂಗಪ್ಪ ಕೊರ್ಲಹಳ್ಳಿ, ಎ.ಕೆ.ಮುಲ್ಲಾ, ಕೆ.ಕೆ.ಬಂಡಿ, ಪ್ರಕಾಶ್ ಸಂಕಣ್ಣವರ, ಗುರಣ್ಣ ಕುರ್ತಕೋಟಿ, ಮುತ್ತಣ್ಣ ಹಾಳಕೇರಿ, ಪಾಲಾಕ್ಷಿ ಗಡದಿನ್ನಿ, ಬಾಬು ಮೂಲಿಮನಿ, ಸಿ.ಟಿ.ಪ್ಯಾಟಿ, ಅಶೋಕ ಹಡಪದ, ಬಸೀರ ಅಹಮ್ಮದ ತಾಂಬೋಟಿ, ಸಿದ್ದಣ್ಣ ನಂಜಪ್ಪನವರ, ರಡ್ಡಿ ಸಮಾಜದ ಹಿರಿಯರು ಹಾಗೂ ಗ್ರಾಮಸ್ಥರು ಸಂತಾಪ ಸೂಚಿಸಿದ್ದಾರೆ.

# ಕಾರ್ಮಿಕರಿಗೆ ಸರಿಯಾಗಿ ಕೂಲಿ ಪಾವತಿಸಿ



■ವಿಜಯಸಾಕ್ಷಿ ಸುದ್ದಿ, ರೋಣ

ರೋಣ ಪಟ್ಟಣದಲ್ಲಿ ಒಂದೇ ಒಂದು ಗುರುತಿಸುವಂತಹ ಸುಂದರ ಉದ್ಯಾನವನವಿದ್ದರೆ ತೋರಿಸಿ. ಇದ್ದ ಕೆಲ ಉದ್ಯಾನವನಗಳೇ ನೋಡುವಂತಿಲ್ಲ. ಇನ್ನೇನು ಹೊಸ ಉದ್ಯಾನ ನಿರ್ಮಿಸುತ್ತೀರಿ ಎಂದು ಪುರಸಭೆ ಸದಸ್ಯೆ ವಿಜಯಲಕ್ಷ್ಮೀ ಕೊಟಗಿ ಮುಖ್ಯಾಧಿಕಾರಿ ರಮೇಶ ಹೊಸಮನಿಯವರನ್ನು ತರಾಟೆಗೆ ತೆಗೆದುಕೊಂಡರು.

ಮಂಗಳವಾರ ಪುರಸಭೆಯ ಸಮಾನ್ಯ ಸಭೆಯಲ್ಲಿ ಮುಖ್ಯಾಧಿಕಾರಿಗಳು ಉದ್ಯಾನವನಗಳ ನಿರ್ವಹಣೆ ಕುರಿತು ವಿಷಯ ಪ್ರಸ್ತಾಪಿಸುತ್ತಿದ್ದಂತೆ ಸದಸ್ಯ ಗದಿಗೆಪ್ಪ ಕಿರೇಸೂರ ಪಟ್ಟಣದಲ್ಲಿರುವ ಉದ್ಯಾನವನಗಳಿಗೆ ಸರಿಯಾಗಿ ನೀರು ಪೂರೈಕೆಯಾಗದೆ ಬಾಡುತ್ತಿವೆ ಎನ್ನುತ್ತಿದ್ದಂತೆ ಮಧ್ಯ ಪ್ರವೇಶಿಸಿದ ಸದಸ್ಯೆ ವಿಜಯಲಕ್ಷ್ಮೀ ಕೊಟಗಿ ತಮ್ಮ ಆಕ್ರೋಶ ಹೊರಹಾಕಿದರು.

ಮಾರ್ಚ್ ತಿಂಗಳಿನಿಂದ ಜುಲೈ ತಿಂಗಳವರೆಗೆ ಪುರಸಭೆಯ ಜಮೆ ಮತ್ತು ಖರ್ಚಿನ ಬಗ್ಗೆ ಮುಖ್ಯಾಧಿಕಾರಿಗಳು ವರದಿಯನ್ನು ಒಪ್ಪಿಸುತ್ತಿದ್ದಂತೆ, ಸದಸ್ಯ ಸಂತೋಷ ಕಡಿವಾಲ ಮಾತನಾಡಿ, ಹಣವನ್ನೇನೋ ಖರ್ಚು ಮಾಡಿದ್ದೀರಿ. ಕೆಲಸ ಎಲ್ಲಿ ಮಾಡಿದ್ದೀರಿ ಎಂಬುದನ್ನು ವಿವರಿಸಿ ಎಂದಾಗ ಪಕ್ಷ ಭೇದ ಮರೆತ ಸದಸ್ಯರು ಯಾವ ಉದ್ದೇಶಕ್ಕೆ ಹಣ ಖರ್ಚಾಗಿದೆ ಎಂಬ ನಿಖರ ಮಾಹಿತಿಯನ್ನು ಸಭೆಗೆ ನಿಡಿ ಎಂದು ಆಗ್ರಹಿಸಿದರು. ಇದರಿಂದ ವಿಚಲಿತರಾದ ಮುಖ್ಯಾಧಿಕಾರಿಗಳು ವರದಿಯ ಅನುಸಾರ ಮಾಹಿತಿ ನೀಡಿದರು. ಸದಸ್ಯ ದುರ್ಗಪ್ಪ ಹಿರೇಮನಿ ಮಾತನಾಡಿ, ಪುರಸಭೆಯಲ್ಲಿ ಗುತ್ತಿಗೆ ಅಥವಾ ದಿನಗೂಲಿ ಎಂದು ದುಡಿಯುತ್ತಿರುವ ಕಾರ್ಮಿಕರಿಗೆ ಕೂಲಿ ಪಾವತಿಸಿ. ಅವರು ಬಡವರು. 12 ತಿಂಗಳಾದರೂ ಅವರಿಗೆ ಸಂಬಳವಿಲ್ಲ ಎಂದರೆ ಕುಟುಂಬ ನಿರ್ವಹಣೆ ಕಷ್ಟವಾಗುತ್ತದೆ ಎಂದರು. ಈ ಮಾತಿಗೆ ಸದಸ್ಯ ಸಂಗನಗೌಡ ಪಾಟೀಲ ಕೂಡ ದನಿಗೂಡಿಸಿದರು.

ಬಸಮ್ಮ ಕೊಪ್ಪದ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷ ಹನ್ಮಂತಪ್ಪ ತಳ್ಳಿಕೇರಿ, ಸದಸ್ಯ ಬಾವಾಸಾಬ ಬೆಟಗೇರಿ ಮುಂತಾದವರು ಉಪಸ್ಥಿತರಿದ್ದರು.

# ಮನೆಯ ಶೌಚಾಲಯದಲ್ಲಿ ಚಿರತೆ ಪ್ರತ್ಯಕ್ಷ: 8 ಗಂಟೆಗಳ ರೋಚಕ ಕಾರ್ಯಾಚರಣೆ ಬಳಿಕ ಸೆರೆ

■ವಿಜಯಸಾಕ್ಷಿ ಸುದ್ದಿ, ಹಾವೇರಿ

ಜಿಲ್ಲೆಯ ರಾಣೆಬೆನ್ನೂರಿನಲ್ಲಿ ಶಾಕಿಂಗ್ ಘಟನೆಯೊಂದು ನಡೆದಿದೆ. ನಾಡಿಗೇರ್ ಓಣಿಯ ಪಿ.ಟಿ. ಕಾಕಿ ಎಂಬುವವರ ಮನೆಯ ಶೌಚಾಲಯದಲ್ಲಿ ಚಿರತೆ ಅವಿತು ಕುಳಿತಿದ್ದು, ಸ್ಥಳೀಯರಲ್ಲಿ ಆತಂಕ ಸೃಷ್ಟಿಸಿತ್ತು.

ಮಾಹಿತಿ ಸಿಕ್ಕ ತಕ್ಷಣವೇ ಸ್ಥಳಕ್ಕೆ ಅರಣ್ಯ ಇಲಾಖೆ ಸಿಬ್ಬಂದಿ ಧಾವಿಸಿ ಡ್ರೋನ್ ಕ್ಯಾಮೆರಾ, ಬಲೆ ಮತ್ತು ಅರಿವಳಿಕೆ ಚುಚ್ಚುಮದ್ದು ಬಳಸುವ ಮೂಲಕ ಎಂಟು ಗಂಟೆಗಳ ಕಾಲ ನಿರಂತರ ಕಾರ್ಯಾಚರಣೆ ನಡೆಸಿ ಚಿರತೆಯನ್ನು ಯಶಸ್ವಿಯಾಗಿ ಸೆರೆ ಹಿಡಿದರು.

ಚುಚ್ಚು ಮದ್ದು ನೀಡಿದ ಬಳಿಕ ಚಿರತೆಯನ್ನು ಬೋನಿನಲ್ಲಿ ಹಾಕಿ ಸುರಕ್ಷಿತ ಸ್ಥಳಕ್ಕೆ ರವಾನಿಸಲಾಗಿದೆ. ಚಿರತೆ ಯಾರಿಗೂ ಹಾನಿ ಮಾಡದೇ ಬಲೆಗೆ ಸಿಕ್ಕಿದ್ದು, ಕಾಡಿಗೆ ಸ್ಥಳಾಂತರಿಸಲಾಗುತ್ತದೆ ಎಂದು ಅರಣ್ಯ ಅಧಿಕಾರಿಗಳು ತಿಳಿಸಿದ್ದಾರೆ.

# ಆ.11ಕ್ಕೆ ಐಶ್ವರ್ಯ ಪತ್ತಾರರಿಂದ ಪ್ರವಚನ



■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ನಾಗಾವಿ ಗ್ರಾಮದ ಕನ್ನೂರ ಬಸವೇಶ್ವರ ಕಲ್ಯಾಣ ಮಂಟಪದಲ್ಲಿ ಶ್ರೀಶರಣಬಸವೇಶ್ವರ ಪುರಾಣ ಸಮಿತಿ ವತಿಯಿಂದ ಕಳೆದ 44 ವರ್ಷಗಳಿಂದ ಸಾಗಿ ಬಂದಿರುವ ಕಲಬುರ್ಗಿ ಶ್ರೀಶರಣಬಸವೇಶ್ವರ ಪುರಾಣ ಕಾರ್ಯಕ್ರಮದಲ್ಲಿ ಆಗಸ್ಟ್ 11ರಂದು ರಾತ್ರಿ 8 ಗಂಟೆಗೆ ವಿಜಯಪುರದ ಆಧ್ಯಾತ್ಮಿಕ ಚಿಂತಕಿ ಐಶ್ವರ್ಯ ಪವನಕುಮಾರ ಪತ್ತಾರ ಅವರು ವಿಶೇಷ ಪ್ರವಚನ ನೀಡಲಿದ್ದಾರೆ.

ವೇ.ಮೂ ಮೃತ್ಯುಂಜಯ ಸ್ವಾಮೀಜಿ ಹಿರೇಮಠ ಪುರಾಣ ಪಠಿಸುವರು. ವೇ.ಮೂ ಮಂಜಯ್ಯ ಶಾಸ್ತ್ರಿಗಳು ಹಿರೇಹಾಳ ಪ್ರವಚನ ನೀಡುವರು. ವೀರೇಶ್ವರ ಪುಣ್ಯಾಶ್ರಮ ದಾವಣಗೆರೆಯ ಕಲಾವಿದರಾದ ಬಸವರಾಜ ಎಸ್.ಹೊಂಬಳ, ರಾಜಶೇಖರ್ ಎಸ್.ಸಂಗಳಕರ ಹುಬ್ಬಳ್ಳಿ ಇವರು ಸಂಗೀತ ಸೇವೆ ನೀಡಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.



ಲಕ್ಷ್ಮೇಶ್ವರ ಸಮೀಪದ ಹರದಗಟ್ಟಿ ಗ್ರಾಮದಿಂದ ಮುನಿಯನ ತಾಂಡಾಕ್ಕೆ ಸಂಪರ್ಕ ಕಲ್ಪಿಸುವ ಮುಖ್ಯ ರಸ್ತೆ ಕಿತ್ತು ಹೋಗಿದ್ದು, ಸಾರ್ವಜನಿಕರು, ರೈತರು ಸಂಚಾರಕ್ಕೆ ಭಯಪಡುವಂತಾಗಿದೆ.

### ಐತಿಹಾಸಿಕ ಹಿನ್ನೆಲೆಯ ಶಹಪೂರಪೇಟೆ ಶ್ರೀ ವೀರಭದ್ರೇಶ್ವರ, ಶ್ರೀ ಭದ್ರಕಾಳಿ ದೇವರು

# ಶ್ರೀ ವೀರಭದ್ರೇಶ್ವರ, ಶ್ರೀ ಭದ್ರಕಾಳಿ ದೇವರ ಜಾತ್ರೆ ಇಂದಿನಿಂದ

■ವಿಜಯಸಾಕ್ಷಿ ಸುದ್ದಿ, ಗದಗ

ಅವಳಿ ನಗರದ ಶಹಪೂರಪೇಟೆ 202 ವರ್ಷಗಳ ಇತಿಹಾಸ ಹೊಂದಿದೆ. ಸಾಂಸ್ಕೃತಿಕ ನಗರಿ ಎಂದೇ ಲಿಂ. ಸಿದ್ದಲಿಂಗ ಶ್ರೀಗಳು ಬಣ್ಣಿಸಿದ್ದರು. ಇಲ್ಲಿ 200 ವರ್ಷದಿಂದ ಎಲ್ಲ ಹಬ್ಬ ಮಾಡಿಕೊಂಡು ಬರಲಾಗಿದೆ. 1853ರಲ್ಲಿ ಆರಂಭವಾದ ಶ್ರೀ ವೀರಭದ್ರೇಶ್ವರ ದೇವಸ್ಥಾನ ಅಂದಿನಿಂದ ಇಂದಿನವರೆಗೂ ಅದ್ದೂರಿ ಜಾತ್ರೆ ಆಯೋಜಿಸಿಕೊಂಡು ಬರಲಾಗಿದ್ದು, ಈ ವರ್ಷ ಆಗಸ್ಟ್ 7ರಿಂದ ಜಾತ್ರಾ ಮಹೋತ್ಸವ ಆರಂಭವಾಗಲಿದೆ ಎಂದು ನಗರಸಭೆ ಸದಸ್ಯ ಚಂದ್ರಶೇಖರ ತಡಸದ ಹೇಳಿದರು.

ಇಲ್ಲಿನ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಸಿ ಅವರು ಮಾತನಾಡಿದರು.

ಕಳಸಾಪೂರ ಗುಡ್ಡದಲ್ಲಿ ಶ್ರೀ ವೀರಭದ್ರದೇವರು ಮಲಗಿದ್ದು, ಅದನ್ನು ಪ್ರತಿಷ್ಠಾಪಿಸುವಂತೆ ವೀರಭದ್ರಪ್ಪ ಬೇವಿನಮರದ ಕನಸಿನಲ್ಲಿ ಬಂದು ಹೇಳಿದರೆಂಬ ಐತಿಹ್ಯವಿದೆ. ಹಿರಿಯರ ಸಮ್ಮುಖದಲ್ಲಿ ಹುಡುಕಿದಾಗ ಅದೇ ಪ್ರದೇಶದಲ್ಲಿ 1853ರಲ್ಲಿ ಶ್ರೀ ವೀರಭದ್ರ ದೇವರು ದೊರೆಯುತ್ತದೆ. ಆ ಶ್ರೀ ವೀರಭದ್ರೇಶ್ವರ ದೇವರೇ ಇಂದು ಶಹಪೂರಪೇಟೆಯಲ್ಲಿ ನೆಲೆಸಿದೆ. ಕಳೆದ ವರ್ಷ ನೂತನ ಮೂರ್ತಿ ಸ್ಥಾಪನೆ ಮಾಡಲಾಗಿದೆ. ಶ್ರೀ ಭದ್ರಕಾಳಿ, ಶ್ರೀ ವೀರಭದ್ರ ಮೂರ್ತಿಯ ಅದ್ದೂರಿ ರಥ ಸಾಗುತ್ತದೆ ಎಂದು ಹೇಳಿದರು.




> ಶ್ರೀ ವೀರಭದ್ರೇಶ್ವರ ದೇವಸ್ಥಾನಕ್ಕೆ ಎಲ್ಲರಿಗೂ ಮುಕ್ತ ಅವಕಾಶ ನೀಡಬೇಕು ಎನ್ನುವ ಉದ್ದೇಶದಿಂದ ಮುಂದಿನ ವರ್ಷದಿಂದ ದೇವಸ್ಥಾನದ ಮುಂಭಾಗದ ಶಿಲಾಮಂಟಪವನ್ನು ಪುನರ್ ನಿರ್ಮಾಣ ಮಾಡಲು ದೇವಸ್ಥಾನ ಟ್ರಸ್ಟ್ ಕಮಿಟಿ ಹಾಗೂ ಶಹಾಪೂರಪೇಟೆ ಹಿರಿಯರು ತೀರ್ಮಾನಿಸಿದ್ದಾರೆ. ಅವಳಿ ನಗರದ ಭಕ್ತಾದಿಗಳು ತನು-ಮನ-ಧನದಿಂದ ಸಹಾಯ, ಸಹಕಾರ ನೀಡಿ ಶ್ರೀ ವೀರಭದ್ರೇಶ್ವರ ದೇವರ ಕೃಪೆಗೆ ಪಾತ್ರರಾಗಬೇಕು.
>
> – ಚಂದ್ರಶೇಖರ ತಡಸದ.
> ನಗರಸಭೆ ಸದಸ್ಯರು.

ಸುರೇಖಾ ಪಿಳ್ಳೆ ಮಾತನಾಡಿ, ಆಗಸ್ಟ್ 7ರ ಮಧ್ಯಾಹ್ನ 12ಕ್ಕೆ ಶ್ರೀ ಭದ್ರಕಾಳಿ ಸಮೇತ ಶ್ರೀ ವೀರಭದ್ರೇಶ್ವರ ದೇವರ ಕಲ್ಯಾಣ ಮಹೋತ್ಸವ, ಸಂಜೆ 5.30ಕ್ಕೆ ಕಳಸಾರೋಹಣ ನಡೆಯಲಿದೆ. ಆ.9ರ ಮುಂಜಾನೆ 10 ಗಂಟೆಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ, ಆ.11ರ ಸಂಜೆ 6.30ಕ್ಕೆ ಮಹಾ ರಥೋತ್ಸವ, ಆ.12ರ ಮುಂಜಾನೆ 10ಕ್ಕೆ ಅಗ್ನಿ ಪ್ರವೇಶ, ಸಂಜೆ 6.30ಕ್ಕೆ ಲಘು ರಥೋತ್ಸವ, ಆ.19ರ ಸಂಜೆ 7ಕ್ಕೆ ದೀಪಾಲಂಕಾರ ಹಾಗೂ ಮಹಾ ಮಂಗಳಾರತಿ ನಡೆಯಲಿದೆ ಎಂದು ತಿಳಿಸಿದರು.

ಅರಿವು ಫೌಂಡೇಶನ್ ಗದಗ, ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಹಾಗೂ ಶ್ರೀ ವೀರಭದ್ರ ದೇವಸ್ಥಾನ ಟ್ರಸ್ಟ್ ಇವರ ಸಹಕಾರದೊಂದಿಗೆ ಶ್ರೀ ಭದ್ರಕಾಳಮ್ಮ ದೇವಿ ಹಾಗೂ ಶ್ರೀ ವೀರಭದ್ರೇಶ್ವರರ 73ನೇ ಜಾತ್ರಾ ಮಹೋತ್ಸವದ ಅಂಗವಾಗಿ ದಿ. ಸದಾನಂದ ಚನ್ನಪ್ಪ ಪಿಳ್ಳೆ ಸ್ಮರಣಾರ್ಥ ಆಗಸ್ಟ್ 9ರಂದು ಉಚಿತ ಆರೋಗ್ಯ ಶಿಬಿರವನ್ನು ಶ್ರೀ ವೀರಭದ್ರೇಶ್ವರ ಕಲ್ಯಾಣ ಮಂಟಪದಲ್ಲಿ ಆಯೋಜಿಸಲಾಗಿದ್ದು, ಕಾರ್ಯಕ್ರಮವನ್ನು ವಿ.ಪ ಸದಸ್ಯ ಎಸ್.ವ್ಹಿ ಸಂಕನೂರ ಉದ್ಘಾಟಿಸಲಿದ್ದಾರೆ. ಅಧ್ಯಕ್ಷತೆಯನ್ನು ರಾಜು ಖಾನಪ್ಪನವರ ವಹಿಸಿಕೊಳ್ಳಲಿದ್ದಾರೆ. ಮುಖ್ಯ ಅತಿಥಿಯಾಗಿ ಡಿ.ಆರ್. ಪಾಟೀಲ ಆಗಮಿಸಲಿದ್ದಾರೆ ಎಂದು ಮಾಹಿತಿ ನೀಡಿದರು. ಈ ವೇಳೆ ಶ್ರೀ ವೀರಭದ್ರೇಶ್ವರ ದೇವಸ್ಥಾನದ ಧರ್ಮದರ್ಶಿಗಳಾದ ಶಿವಪುತ್ರಪ್ಪ ಬೇವಿನಮರದ, ಶಿವಬಸಪ್ಪ ಯಂಡಿಗೇರಿ, ಅರಿವು ಫೌಂಡೇಶನ್ ಅಧ್ಯಕ್ಷ ವಿಶ್ವನಾಥ ಶೀರಿ, 73ನೇ ಜಾತ್ರಾ ಮಹೋತ್ಸವದ ಅಧ್ಯಕ್ಷ ರಾಚಣ್ಣ ದೊಟ್ಯಾಳ, ಉಪಾಧ್ಯಕ್ಷ ವಿಶ್ವನಾಥ ಕೆರಕಣ್ಣವರ, ಕಾರ್ಯದರ್ಶಿ ರಾಚೋಟೇಶ್ವರ ಕಾಡಪ್ಪನವರ, ದಾನೇಶ ತಡಸದ, ಶಂಕರ ಕಾರದಕಟ್ಟಿ, ವಿಶ್ವನಾಥ ಶಿರಗಣ್ಣವರ, ಆದರ್ಶ ಅಸೂಟಿ, ವಿಶ್ವನಾಥ ಇಟಗಿ, ಗಗನ ಗೋಕಾವಿ, ಅಭಿಷೇಕ ಸಂಬರಗಿ ಉಪಸ್ಥಿತರಿದ್ದರು.

### 'ಗುಡ್ಡಾಪೂರ ದಾನಮ್ಮದೇವಿ' ಪುರಾಣಕ್ಕೆ ಚಾಲನೆ ನೀಡಿದ ಡಾ. ಅನ್ನದಾನೀಶ್ವರ ಸ್ವಾಮೀಜಿ

# ಶಿವಶರಣರ ತತ್ವ ಭೋದನೆಗಳನ್ನು ಶ್ರವಣ ಮಾಡಿ




> ಡಾ. ಸಂಗಮೇಶ ಕೊಳ್ಳಿಯವರ ಮಾತನಾಡಿ, ಇಂದಿನ ಯುವ ಪೀಳಿಗೆ ಮೊಬೈಲ್ ಮತ್ತು ಟಿ.ವಿ ಮಾಧ್ಯಮಗಳ ಬೆನ್ನು ಹತ್ತಿ ನಮ್ಮ ಪೂರ್ವಜರು ಮಾಡುವ ಶ್ರಮದಾನವನ್ನು ಮರೆತಿದ್ದಾರೆ. ಇದರಿಂದ ಯುವಕರಲ್ಲಿ ಅನಾರೋಗ್ಯ ಕಾಡುತ್ತಿದೆ. ಇಂತಹ ಧಾರ್ಮಿಕ ಕಾರ್ಯಗಳಲ್ಲಿ ಯುವಕರು ಹೆಚ್ಚಾಗಿ ಪಾಲ್ಗೊಳ್ಳಬೇಕಿದೆ ಎಂದು ಕಿವಿಮಾತು ಹೇಳಿದರು.

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಶ್ರಾವಣ ಮಾಸದಲ್ಲಿ ಹೆಚ್ಚು ಧಾರ್ಮಿಕ ಕಾರ್ಯಗಳಲ್ಲಿ ಪಾಲ್ಗೊಂಡು ಶಿವಶರಣರ ತತ್ವ ಭೋದನೆಗಳನ್ನು ಶ್ರವಣ ಮಾಡಿಕೊಳ್ಳಬೇಕು ಎಂದು ಮುಂಡರಗಿ ನಾಡೋಜ ಡಾ. ಅನ್ನದಾನೀಶ್ವರ ಸ್ವಾಮೀಜಿಗಳು ಹೇಳಿದರು.

ಇಲ್ಲಿಯ ಅನ್ನದಾನೀಶ್ವರ ಶಾಖಾ ಮಠದಲ್ಲಿ ಶ್ರಾವಣ ಮಾಸದ ಅಂಗವಾಗಿ ಹಮ್ಮಿಕೊಂಡ ಗುಡ್ಡಾಪೂರ ದಾನಮ್ಮದೇವಿ ಪುರಾಣ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಶ್ರೀಗಳು, ದಿನ ನಿತ್ಯದ ಜಂಜಾಟದ ಬದುಕಿನಲ್ಲಿ ಧಾರ್ಮಿಕತೆಯನ್ನು ಒಂದು ಗಂಟೆಯಾದರೂ ಅಳವಡಿಸಿಕೊಳ್ಳಬೇಕು. ಧಾರ್ಮಿಕ ಸಾಧಕರ ನೀತಿ, ಅವರ ಜೀವನ ಚರಿತ್ರೆ ಸ್ಫೂರ್ತಿಯಾಗುತ್ತದೆ ಎಂದರು.

ಜಿ.ಪಂ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ ಮಾತನಾಡಿ, ನಮ್ಮ ಪೂರ್ವಜರು ಲಕ್ಕುಂಡಿ ಗ್ರಾಮದಲ್ಲಿ ನೂರೊಂದು ಗುಡಿ, ಬಾವಿಗಳನ್ನು ನಿರ್ಮಿಸಿದ್ದಾರೆ. ಇದರ ಹಿಂದೆ ನಮ್ಮ ಜಂಜಾಟದ ಜೀವನಕ್ಕೆ ಧಾರ್ಮಿಕ ಮನೋಭಾವನೆ ಮೂಡಲಿ, ದೇವರ ಬಗ್ಗೆ ಭಯ-ಭಕ್ತಿ ಬರಲಿ ಎಂಬ ಉದ್ದೇಶವಿದೆ. ಇಲ್ಲಿ ಹಲವಾರು ಶಿವಶರಣರು ಶ್ರದ್ಧೆ, ನಿಷ್ಠೆ, ಆಚಾರ-ವಿಚಾರದಿಂದ ತಮ್ಮ ಜೀವನವನ್ನು ಸಾಗಿಸಿದ್ದಾರೆ. ಅವರ ಸನ್ಮಾರ್ಗದಲ್ಲಿ ನಾವೆಲ್ಲರೂ ನಡೆಯಬೇಕಾಗಿದೆ ಎಂದರು.

ಡಾ. ಗಿರಿಜಾ ಹಸಬಿ ಪುರಾಣ ಪ್ರವಚನವನ್ನು ಆರಂಭಿಸಿದರು. ಷಡಕ್ಷರಯ್ಯ ಬದ್ನಿಮಠ, ಬಸನಗೌಡ ಪಾಟೀಲ ಸಂಗೀತ ಸೇವೆ ನೀಡಿದರು.

ಶಂಕ್ರಯ್ಯ ಹಿರೇಮಠ ಅಧ್ಯಕ್ಷತೆ ವಹಿಸಿದ್ದರು. ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ಸದಸ್ಯರಾದ ವಿರೂಪಾಕ್ಷಪ್ಪ ಬೆಟಗೇರಿ, ರಜೀಯಾಬೇಗಂ ತಹಸೀಲ್ದಾರ, ಎಸ್.ಬಿ. ಕಲಕೇರಿ, ಅಶೋಕ ಬೂದಿಹಾಳ, ನಜೀರಸಾಬ ಕಿರಟಗೇರಿ, ಶಾಂತಮ್ಮ ಕಣವಿ, ಚಂದ್ರಶೇಖರಪ್ಪ ಮೂಡಲತೋಟ, ನೀಲಮ್ಮ ವಡ್ಡರ, ಪ್ರೇಮಾ ಮಟ್ಟಿ, ಶಿವಪ್ಪ ಕಮತರ, ಈರಣ್ಣ ತಿಮ್ಮಾಪೂರ, ಗಿರಿಜಮ್ಮ ಚಬ್ಬೇರಭಾವಿ, ಸಾವಿತ್ರಿ ಯಲಿಶಿರುಂದ, ಅನ್ನದಾನೀಶ್ವರ ಸೇವಾ ಸಮಿತಿಯ ಅಧ್ಯಕ್ಷ ಅಂದಾನಯ್ಯ ಮುನವಳ್ಳಿಮಠ ಉಪಸ್ಥಿತರಿದ್ದರು. ಅಂಬರೀಶ ಕರೆಕಲ್ಲ ಸ್ವಾಗತಿಸಿದರು. ಮುತ್ತುರಾಜ್ ಗಡ್ಡಿ ನಿರೂಪಿಸಿ ವಂದಿಸಿದರು.

# ಶ್ರೇಷ್ಠ ಸಾಧನೆಗೆ ಶ್ರಮಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿದ್ಯಾರ್ಥಿಗಳು ಕಠಿಣ ಪರಿಶ್ರಮ, ಶ್ರದ್ಧೆ, ಏಕಾಗ್ರತೆ ರೂಢಿಸಿಕೊಂಡು ಸತತಾಭ್ಯಾಸದ ಮೂಲಕ ಉನ್ನತ ಗುರಿ ಸಾಧಿಸಬೇಕು ಎಂದು ಉತ್ತರಕನ್ನಡ ಜಿಲ್ಲೆಯ ಸಿದ್ದಾಪುರದ ಸರಕಾರಿ ಪದವಿ ಕಾಲೇಜಿನ ಪ್ರಾಧ್ಯಾಪಕ ಚೇತನ್ ಕುಮಾರ್ ಅಭಿಪ್ರಾಯಪಟ್ಟರು.

ಅವರು ಮಂಗಳವಾರ ಪಟ್ಟಣದ ತಾಯಿ ಪಾರ್ವತಿ ಮಕ್ಕಳ ಬಳಗ ಸಂಸ್ಥೆಯ ಎಸ್.ಎಂ.ಜೆ.ವಿ.ಜಿ ಪದವಿಪೂರ್ವ ಮಹಿಳಾ ಕಾಲೇಜಿನಲ್ಲಿ ಪ್ರಸಕ್ತ ಸಾಲಿನ ಕ್ರೀಡಾ ಮತ್ತು ಸಾಂಸ್ಕೃತಿಕ ಚಟುವಟಿಕೆಗಳ ಉದ್ಘಾಟನೆ ಮತ್ತು ಪ್ರಥಮ ಪಿಯುಸಿ ವಿದ್ಯಾರ್ಥಿನಿಯರ ಸ್ವಾಗತ ಸಮಾರಂಭದಲ್ಲಿ ಉಪನ್ಯಾಸ ನೀಡಿ ಮಾತನಾಡಿದರು.



ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ವಿದ್ಯಾರ್ಥಿಗಳು ಆಯ್ದುಕೊಂಡ ಕ್ಷೇತ್ರದಲ್ಲಿ ಶ್ರೇಷ್ಠವಾದುದನ್ನು ಸಾಧಿಸಲು ಏಕಾಗ್ರತೆಯಿಂದ ಶ್ರಮಿಸಬೇಕು. ನಮ್ಮ ಭವಿಷ್ಯದ ರೂವಾರಿಗಳು ನಾವೇ ಆದ್ದರಿಂದ ಉನ್ನತ, ಶಿಕ್ಷಣ, ಜ್ಞಾನ ಮತ್ತು ನಾಯಕತ್ವದ ಗುಣ ಬೆಳೆಸಿಕೊಂಡು ಸಮಾಜಮುಖಿಯಾಗಿ ದೇಶದ ಅಭಿವೃದ್ಧಿಗೆ ಕೈ ಜೋಡಿಸಬೇಕು. ಪಿಯು ಶಿಕ್ಷಣವನ್ನು ತಪಸ್ಸಿನ ರೀತಿಯಲ್ಲಿ ಮಾಡಿ ಸಾಧನೆಯೆಡೆ ಸಾಗಿ, ಉತ್ತಮ ಭವಿಷ್ಯ ರೂಪಿಸಿಕೊಳ್ಳಿ ಎಂದು ಕರೆ ನೀಡಿದರು.

ಕಾರ್ಯಕ್ರಮ ಉದ್ಘಾಟಿಸಿದ ಸಂಸ್ಥೆಯ ಸದಸ್ಯೆ ಶಾರಕ್ಕ ಮಹಾಂತಶೆಟ್ಟರ, ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಕಾರ್ಯದರ್ಶಿ ಜಯಲಕ್ಷ್ಮೀ ಗಡ್ಡದೇವರಮಠ ಮಾತನಾಡಿದರು. ಸಂಸ್ಥೆಯ ಅಧ್ಯಕ್ಷೆ ಸುವರ್ಣಭಾಯಿ ಬಹದ್ದೂರದೇಸಾಯಿ ಮತ್ತು ಸದಸ್ಯೆ ರೋಹಿಣಿಭಾಯಿ ಬಹದ್ದೂರ್‌ದೇಸಾಯಿ, ಪ್ರಾಚಾರ್ಯೆ ಸರಸ್ವತಿ ಹುಲ್ಲಣ್ಣನವರ ಉಪಸ್ಥಿತರಿದ್ದರು.

ಈ ವೇಳೆ ಕಾಲೇಜಿನ ಉಪನ್ಯಾಸಕರಾದ ಎ.ಬಿ. ಮೂಲಿಮನಿ, ಡಿ.ಜೆ. ಕಟಗಿ, ಚೈತ್ರ ಮಳಲಿ, ಅರ್ಪಣ ರಾಯ್ಕರ, ನಿಂಗರಾಜ್ ಕುಂಬಾರ, ಜಗದೀಶ್ ದ್ಯಾಮಣ್ಣವರ್, ನಿವೃತ್ತ ಉಪನ್ಯಾಸಕರುಗಳಾದ ಎಸ್.ಎನ್. ಮಳಲಿ, ಎನ್.ಬಿ. ತಳ್ಳಳ್ಳಿ, ಎ.ಎನ್. ನಾವಿ, ಎಸ್.ಎಫ್. ಕೊಡ್ಲಿ ಹಾಜರಿದ್ದರು. ಎಸ್.ಬಿ. ಅಣ್ಣಿಗೇರಿ, ಎಸ್.ಎಂ. ವಿರಕ್ತಮಠ, ಜಗದೀಶ್ ಶಿರಹಟ್ಟಿ ನಿರೂಪಿಸಿದರು.

# ಕಾರವಾರ-ಇಳಕಲ್ ರಾ.ಹೆ ಮೇಲ್ದರ್ಜೆಗೇರಿಸಲು ಮನವಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಾರವಾರ-ಇಳಕಲ್ ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ಪ್ರಾರಂಭಿಸುವಂತೆ ಮಾಜಿ ಮುಖ್ಯಮಂತ್ರಿ, ಹಾಲಿ ಸಂಸದ ಬಸವರಾಜ ಬೊಮ್ಮಾಯಿ ಕೇಂದ್ರ ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರನ್ನು ಬುಧವಾರ ನವದೆಹಲಿಯಲ್ಲಿ ಭೇಟಿ ಮಾಡಿ ಮನವಿ ಮಾಡಿದರು.



ಕಾರವಾರ, ಕೈಗಾ, ಮುಂಡಗೋಡ, ಸವಣೂರು, ಲಕ್ಷ್ಮೇಶ್ವರ, ಗದಗ, ಗಜೇಂದ್ರಗಡ ಮಾರ್ಗವಾಗಿ ಇಳಕಲ್ ತಲುಪುವ ಸುಮಾರು 318 ಕಿ.ಮೀ ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಮೇಲ್ದರ್ಜೆಗೇರಿಸಲು ಈಗಾಗಲೇ ತಾತ್ವಿಕ ಒಪ್ಪಿಗೆ ನೀಡಲಾಗಿದೆ. ಯೋಜನೆಯ ಡಿಪಿಆರ್ ಸಹ ಸಲ್ಲಿಕೆಯಾಗಿದ್ದು, ಭೂಸ್ವಾಧೀನಕ್ಕೆ ನಿರ್ಧರಿಸಲಾಗಿದೆ.

ಪ್ರಸ್ತುತ ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಮೇಲ್ದರ್ಜೆಗೇರಿಸಲು ತೀರ್ಮಾನಿಸಿರುವುದರಿಂದ, ರಾಜ್ಯ ಸರ್ಕಾರದ ಸರಿಯಾದ ನಿರ್ವಹಣೆ ಇಲ್ಲದ ಕಾರಣ ಹಲವು ವರ್ಷದಿಂದ ಈ ರಸ್ತೆಯಲ್ಲಿ ವಾಹನ ಸಂಚರಿಸಲು ಸಾಧ್ಯವಾಗದ ಸ್ಥಿತಿಯಲ್ಲಿದೆ. ಇನ್ನೊಂದೆಡೆ ಯೋಜನೆಗೆ ಅಧಿಕೃತ ಅನುಮತಿ ನೀಡದೇ ಇರುವುದರಿಂದ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರೂ ಯಾವುದೇ ಕೆಲಸ ಮಾಡುತ್ತಿಲ್ಲ.

ಹೀಗಾಗಿ ಇದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ ತಕ್ಷಣವೇ ರಾಷ್ಟ್ರೀಯ ಹೆದ್ದಾರಿಯನ್ನಾಗಿ ಮೇಲ್ದರ್ಜೆಗೇರಿಸಿ ಕಾಮಗಾರಿ ಆರಂಭಿಸುವಂತೆ ವಿನಂತಿಸಿಕೊಂಡಿದ್ದಾರೆ. ಈ ರಸ್ತೆಗೆ ಸಂಪರ್ಕ ಕಲ್ಪಿಸುವ ಇತರೇ ಸಿಆರ್‌ಎಫ್ ರಸ್ತೆಗಳನ್ನು ಅಭಿವೃದ್ಧಿಪಡಿಸುವಂತೆಯೂ ಮನವಿ ಮಾಡಿದ್ದಾರೆ.

# ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧದ ಮಾನಹಾನಿ ಪ್ರಕರಣ: ರಾಹುಲ್ ಗಾಂಧಿಗೆ ಜಾಮೀನು ಮಂಜೂರು!

■ವಿಜಯಸಾಕ್ಷಿ ಸುದ್ದಿ, ರಾಂಚಿ

ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧದ ಮಾನಹಾನಿ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಹುಲ್ ಗಾಂಧಿಗೆ ಜಾಮೀನು ಮಂಜೂರು ಮಾಡಿ ಜನಪ್ರತಿನಿಧಿಗಳ ನ್ಯಾಯಾಲಯ ಆದೇಶ ಹೊರಡಿಸಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಬುಧವಾರ ಬೆಳಿಗ್ಗೆ 10:55ರ ಸುಮಾರಿಗೆ ರಾಹುಲ್ ಗಾಂಧಿ ನ್ಯಾಯಾಲಯದ ಮುಂದೆ ಖುದ್ದು ಹಾಜರಾದರು. ಇದಕ್ಕೂ ಮುನ್ನ ಜೂ.26ರಂದು ಖುದ್ದು ಹಾಜರಾಗುವಂತೆ ವಿಶೇಷ ನ್ಯಾಯಾಲಯ ನೀಡಿದ್ದ ಆದೇಶವನ್ನು ಪ್ರಶ್ನಿಸಿ ರಾಹುಲ್ ಗಾಂಧಿ ಜಾರ್ಖಂಡ್ ಹೈಕೋರ್ಟ್‌ಗೆ ಮೊರೆ ಹೋಗಿದ್ದರು.

ರಾಹುಲ್ ಗಾಂಧಿ ಪರ ವಕೀಲರು, ತಮ್ಮ ಕಕ್ಷಿದಾರರು ನಿಗದಿತ ದಿನದಂದು ಹಾಜರಾಗಲು ಸಾಧ್ಯವಾಗುವುದಿಲ್ಲ. ಬದಲಿಗೆ ಆ.6ರಂದು ಹಾಜರಾಗಲು ಅವಕಾಶ ನೀಡುವಂತೆ ಜೂ.10ರಂದು ಕೇಳಿಕೊಂಡಿದ್ದರು. ಅದರಂತೆ ಬುಧವಾರದಂದು ಜಾರ್ಖಂಡ್‌ನ ಚೈಬಾಸಾದ ಜನಪ್ರತಿನಿಧಿಗಳ ನ್ಯಾಯಾಲಯ ಜಾಮೀನು ಮಂಜೂರು ಮಾಡಿದೆ.

**ಏನಿದು ಘಟನೆ:** ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧ ರಾಹುಲ್ ಗಾಂಧಿಯವರು 2018ರ ಚುನಾವಣಾ ರ್‍ಯಾಲಿಯಲ್ಲಿ ಅವಹೇಳನಕಾರಿ ಹೇಳಿಕೆ ನೀಡಿದ್ದರು. ಈ ಹಿನ್ನೆಲೆ ಪ್ರತಾಪ್ ಕುಮಾರ್ ಎಂಬ ವ್ಯಕ್ತಿ ರಾಹುಲ್ ಗಾಂಧಿ ವಿರುದ್ಧ ಮಾನನಷ್ಟ ಮೊಕದ್ದಮೆ ಹೂಡಿದ್ದರು.

### ಪೌರಕಾರ್ಮಿಕರ ನೇಮಕಾತಿ ವೇಳೆ ತನ್ನ ಮಗನನ್ನು ಪರಿಗಣಿಸಲಿಲ್ಲ ಎಂಬ ಆರೋಪ

# ಪುರಸಭೆ ಎದುರು ವಿಚಿತ್ರ ಪ್ರತಿಭಟನೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪುರಸಭೆಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಪೌರಕಾರ್ಮಿಕರನ್ನು ನೇಮಿಸುವ ವೇಳೆ ನನ್ನ ಮಗನನ್ನು ಪರಿಗಣಿಸಲಿಲ್ಲ ಎಂದು ಆರೋಪಿಸಿ ಸುರೇಶ ಬಸವನಾಯ್ಕರ್ ಎಂಬಾತ ತನ್ನ ಮೈಗೆ ಮಲ ಬಳಿದುಕೊಂಡು ಪ್ರತಿಭಟನೆ ನಡೆಸಿದ ಘಟನೆ ಬುಧವಾರ ನಡೆದಿದೆ.

ಪಟ್ಟಣದ ಪುರಸಭೆ ಮುಂದೆ ಸುರೇಶ ಬಸವನಾಯ್ಕರ್ ಎಂಬ ವ್ಯಕ್ತಿ ಪ್ಲಾಸ್ಟಿಕ್ ಚೀಲದಲ್ಲಿ ಮಲ ತಂದು ತನ್ನ ಮುಖ, ತಲೆ, ಮೈ-ಕೈ ಮೇಲೆ ಸವರಿಕೊಂಡು ವಿಚಿತ್ರ ರೀತಿಯಲ್ಲಿ ಪ್ರತಿಭಟನೆ ನಡೆಸಿದ್ದಾನೆ. ಈ ವೇಳೆ ಆತನನ್ನು ಮಾತನಾಡಿಸಿದಾಗ, ಪಟ್ಟಣದ ಪುರಸಭೆಯಲ್ಲಿ ಕಳೆದ ಹಲವು ವರ್ಷಗಳಿಂದ ಸಪಾಯಿ ಕರ್ಮಚಾರಿಯಾಗಿ ಸೇವೆ ಸಲ್ಲಿಸಿದ್ದೇನೆ. ಆಗಲೂ ನನಗೆ ಪುರಸಭೆಯಲ್ಲಿ ಖಾಯಂ ಮಾಡಿಕೊಳ್ಳಲಿಲ್ಲ. ಪಟ್ಟಣದ ವಿವಿಧ ಸರ್ಕಾರಿ ಕಚೇರಿಗಳಲ್ಲಿ ಸಪಾಯಿ ಕರ್ಮಚಾರಿಯಾಗಿ ಕೆಲಸ ಮಾಡುತ್ತಿದ್ದೇನೆ.



ಕಳೆದ ಕೆಲ ತಿಂಗಳ ಹಿಂದೆ ಪುರಸಭೆಯ ಆಡಳಿತ ಮಂಡಳಿ ಗುತ್ತಿಗೆ ಆಧಾರದ ಮೇಲೆ ಸುಮಾರು 10ಕ್ಕೂ ಹೆಚ್ಚು ಪೌರ ಕಾರ್ಮಿಕರನ್ನು ನೇಮಕ ಮಾಡಿಕೊಳ್ಳಲಾಗಿದೆ. ಈಗಲಾದರೂ ನನ್ನ ಮಗನಿಗೆ ಪುರಸಭೆಯಲ್ಲಿ ಹೊರ ಗುತ್ತಿಗೆ ಆಧಾರದ ಮೇಲೆ ಕೆಲಸ ನೀಡುವಂತೆ ಮನವಿ ಮಾಡಿದ್ದರೂ ಯಾರೂ ಸ್ಪಂದಿಸುವ ಕಾರ್ಯ ಮಾಡಿಲ್ಲ. ಆದರೆ ನನ್ನ ಮಗನನ್ನು ಬಿಟ್ಟು ಬೇರೆಯವರನ್ನು ನೇಮಕ ಮಾಡಲಾಗಿದೆ. ಇದರಿಂದ ಬೇಸತ್ತು ಪುರಸಭೆ ಎದುರು ಮೈ ಮೇಲೆ ಮೇಲೆ ಸುರಿದು ಕೊಂಡು ಪ್ರತಿಭಟನೆ ನಡೆಸಿದ್ದೇನೆ ಎಂದಿದ್ದಾನೆ.

ಈ ವ್ಯಕ್ತಿಯ ವಿಚಿತ್ರ ವರ್ತನೆಯಿಂದ ಕೆಲ ಹೊತ್ತು ಗೊಂದಲದ ವಾತಾವರಣ ನಿರ್ಮಾಣವಾಗಿತ್ತು. ಸುದ್ದಿ ತಿಳಿದು ಪೊಲೀಸ್ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ, ಸುರೇಶನ ಮನವೊಲಿಸಿ ಪ್ರತಿಭಟನೆ ಕೈಬಿಟ್ಟು ಮನೆಗೆ ಕಳುಹಿಸಿದರು. ಆದರೆ, ಈ ವ್ಯಕ್ತಿಯ ಪ್ರತಿಭಟನೆ ನ್ಯಾಯಯುತವೇ ಎಂಬುದು ಯಕ್ಷಪ್ರಶ್ನೆಯಾಗಿದೆ.

### ಸೋರುತ್ತಿರುವ ಲಕ್ಷ್ಮೇಶ್ವರದ ಸೋಮೇಶ್ವರ ದೇವಸ್ಥಾನ

# ಭಕ್ತರಿಂದ ತಾಡಪತ್ರಿ ಹೊದಿಕೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇಲ್ಲಿನ ಪುಲಿಗೆರೆಯ ಶ್ರೀ ಸೋಮೇಶ್ವರ ದೇವಸ್ಥಾನದ ಮೇಲ್ಛಾವಣಿ ಕಳೆದ ಹಲವು ವರ್ಷಗಳಿಂದ ಸೋರುತ್ತಿದೆ. ಪ್ರಾಚ್ಯವಸ್ತು ಇಲಾಖೆಯ ವ್ಯಾಪ್ತಿಗೊಳಪಡುವ ಈ ದೇವಸ್ಥಾನದ ಮೇಲ್ಛಾವಣಿ, ಶಿಥಿಲಗೊಂಡ ಉತ್ತರ ದ್ವಾರದ ದುರಸ್ತಿ, ಮೂಲಭೂತ ಸೌಲಭ್ಯಕ್ಕಾಗಿ ಪ್ರವಾಸೋದ್ಯಮ ಇಲಾಖೆಯಿಂದ ಅನುದಾನ ಕಲ್ಪಿಸುವಂತೆ ಅನೇಕ ಬಾರಿ ಭಕ್ತರು ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಪ್ರವಾಸೋದ್ಯಮ ಸಚಿವರೂ ಆದ ಹೆಚ್.ಕೆ. ಪಾಟೀಲರು ದೇವಸ್ಥಾನದ ಅಭಿವೃದ್ಧಿಗೆ 50 ಲಕ್ಷ ರೂ ಅನುದಾನ ಕಲ್ಪಿಸಲಾಗುವುದು ಎಂಬ ಭರವಸೆ ನೀಡಿದ್ದರಾದರೂ ಇದುವರೆಗೂ ಅನುದಾನ ಮಂಜೂರಾಗಿಲ್ಲ. ಈ ಹಿಂದೆ ಡಾ. ಸುಧಾಮೂರ್ತಿ ಅವರು ಇನ್ಫೋಸಿಸ್ ಪ್ರತಿಷ್ಠಾನದಿಂದ ಕೋಟ್ಯಾಂತರ ರೂ ಖರ್ಚು ಮಾಡಿ ದೇವಸ್ಥಾನ ಅಭಿವೃದ್ಧಿಪಡಿಸಿದ್ದರೂ ಮೇಲ್ಛಾವಣಿ ದುರಸ್ಥಿ ಕಾರ್ಯವಾಗಿಲ್ಲ.

ಪ್ರತಿ ವರ್ಷ ಮಳೆಗಾಲದಲ್ಲಿ ದೇವಸ್ಥಾನದ ಮುಖ್ಯ ಪ್ರಾಂಗಣ ಸೋರುತ್ತಿದ್ದು, ಯಾವುದೇ ಧಾರ್ಮಿಕ ಕಾರ್ಯಕ್ರಮಗಳಿಗೆ ಅಡ್ಡಿಯಾಗುತ್ತಿದೆ. ಸದ್ಯ ಶ್ರಾವಣ ಮಾಸದ ಪ್ರಯುಕ್ತ ನಡೆಯುವ ಪುರಾಣ ಪ್ರವಚನ ಕಾರ್ಯಕ್ರಮ ಸೋರುವ ಪ್ರಾಂಗಣದಲ್ಲಿಯೇ ನಡೆಯುತ್ತಿದೆ. ಮಂಗಳವಾರ ಸುರಿದ ಮಳೆಯಿಂದ ದೇವಸ್ಥಾನದ ಮಾಳಿಗೆ ಜಿನುಗುಟ್ಟುತ್ತಿರುವುದರಿಂದ ಭಕ್ತರೇ ಹಣ ಸಂಗ್ರಹಿಸಿ ತಾಡಪತ್ರಿ ಹೊದಿಕೆ ಹಾಕಿದ್ದಾರೆ. ಈ ಪರಿಸ್ಥಿತಿ ಭಕ್ತರಲ್ಲಿ ನೋವುಂಟು ಮಾಡಿದೆ.

ಪ್ರಾಚ್ಯ ವಸ್ತು ಇಲಾಖೆಯ ಪರವಾನಗಿ ಇಲ್ಲದೇ ದೇವಸ್ಥಾನದಲ್ಲಿ ಯಾವುದೇ ದುರಸ್ತಿ, ಅಭಿವೃದ್ಧಿ ಕಾರ್ಯ ಮಾಡುವಂತಿಲ್ಲ.

ಈ ಹಿನ್ನೆಲೆಯಲ್ಲಿ ಪ್ರವಾಸೋದ್ಯಮ ಇಲಾಖೆ ಸಚಿವರು ಮತ್ತು ಅಧಿಕಾರಿಗಳು ಇತ್ತ ಗಮನಹರಿಸಿ ದೇವಸ್ಥಾನ ರಕ್ಷಣೆಗೆ ಮುಂದಾಗಬೇಕು ಎಂಬುದು ಭಕ್ತರ ಒತ್ತಾಸೆಯಾಗಿದೆ.

# ಕಾಂಗ್ರೆಸ್ ಸಂಸದೆಯ ಸರ ಕದ್ದ ಖದೀಮರು ಅರೆಸ್ಟ್!

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ದೆಹಲಿ ಪೊಲೀಸರು ಕಾರ್ಯಾಚರಣೆ ನಡೆಸಿ ಸಂಸದೆ ಸುಧಾ ರಾಮಕೃಷ್ಣನ್ ಅವರ ಸರ ದೋಚಿ ಪರಾರಿಯಾಗಿದ್ದ ಕಳ್ಳರನ್ನು ಬಂಧಿಸಿದ್ದಾರೆ. ತಮಿಳುನಾಡಿನ ಮೈಲಾಡುತುರೈನ ಸಂಸದೆ ಸುಧಾ ಅವರು ಆಗಸ್ಟ್ 4ರಂದು ಚಾಣಕ್ಯಪುರಿಯ ಪೋಲೆಂಡ್ ರಾಯಭಾರ ಕಚೇರಿಯ ಬಳಿ ಡಿಎಂ-ಕೆ ಶಾಸಕಿ ರಾಜತಿ ಅವರ ಜೊತೆ ನಡೆದುಕೊಂಡು ಹೋಗುತ್ತಿದ್ದರು. ಈ ವೇಳೆ ಸ್ಕೂಟರ್‌ನಲ್ಲಿ ಬಂದ ಹೆಲ್ಮೆಟ್ ಧರಿಸಿದ್ದ ವ್ಯಕ್ತಿ ಸುಧಾ ಅವರ ಚೈನ್ ಕಿತ್ತುಕೊಂಡು ಪರಾರಿಯಾಗಿದ್ದ. ಈ ಸಂಬಂಧ ದೆಹಲಿ ಪೊಲೀಸರಿಗೆ ದೂರು ನೀಡಿದ್ದರು. ಅಲ್ಲದೇ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ಪತ್ರವನ್ನು ಸಹ ಬರೆದಿದ್ದರು. ಇದೀಗ ಪೊಲೀಸರು ಖದೀಮನನ್ನು ಬಂಧಿಸಿದ್ದು, ಆತನಿಂದ ಚಿನ್ನದ ಸರವನ್ನೂ ವಶಕ್ಕೆ ಪಡೆಯಲಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka